MAA ಫ್ರೆಂಡ್ಸ್ ಸಾರಥ್ಯದಲ್ಲಿ...

# ಯುವ ಮಾರ್ಗ

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

ಸಂಪಾದಕರು : ಅನಿಲ ಕುಮಾರ್ ಹೆಚ್
Cell : 9743497111

YUVA MARGA KANNADA DAILY NEWS PAPER

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ
Cell : 9743496111

ಸಂಪುಟ: 04 | ಸಂಚಿಕೆ: 256 | ಶನಿವಾರ : 26-07-2025 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2-00

VOLUME: 04 | ISSUE: 256 | SATURDAY : 25-07-2025 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00

# ರಿಮ್ಸ್ ಆಸ್ಪತ್ರೆಯಲ್ಲಿ ಪ್ರಥಮ ಬಾರಿಗೆ ವಿಶೇಷ ಶಸ್ತ್ರ ಚಿಕಿತ್ಸೆ ಯಶಸ್ವಿ

● ಅಂಡಾಣುದಲ್ಲಿ ನೀರು ತುಂಬಿದ ಚೀಲದ ಶಸ್ತ್ರಚಿಕಿತ್ಸೆ ● ಜಿಲ್ಲಾಧಿಕಾರಿಗಳಿಂದ ಶಸ್ತ್ರ ಚಿಕಿತ್ಸೆಯ ವೀಕ್ಷಣೆ ● ರಿಮ್ಸ್ ವೈದ್ಯರಿಗೆ ಜಿಲ್ಲಾಧಿಕಾರಿಗಳಿಂದ ಶುಭಾಶಯ ● ರಿಮ್ಸಗೆ ಆಗಮಿಸಿ ಸೇವೆ ಪಡೆಯಲು ಜನತೆಗೆ ಸಲಹೆ

ಯುವ ಮಾರ್ಗ ಸುದ್ದಿ

**ರಾಯಚೂರು,ಜು.25–** ಅಂಡಾಣುವಿನಲ್ಲಿ ನೀರು ತುಂಬಿದ ಚೀಲದ ಶಸ್ತ್ರ ಚಿಕಿತ್ಸೆಯು ರಾಯಚೂರ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ (ರಿಮ್ಸ್) ಬೋಧಕ ಆಸ್ಪತ್ರೆಯಲ್ಲಿ ಪ್ರಥಮ ಬಾರಿಗೆ ಜುಲೈ 25ರಂದು ಯಶಸ್ವಿಯಾಗಿ ನಡೆಯಿತು.

ಈ ಶಸ್ತ್ರ ಚಿಕಿತ್ಸೆಯ ಹಿನ್ನೆಲೆಯಲ್ಲಿ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ಬೆಳಗ್ಗೆ ಆಸ್ಪತ್ರೆಗೆ ಭೇಟಿ ನೀಡಿ, ವೈದ್ಯರು ಪ್ರಥಮ ಬಾರಿಗೆ ನಡೆಸುತ್ತಿರುವ ಶಸ್ತ್ರಚಿಕಿತ್ಸೆ ವಿಧಾನಗಳನ್ನು ಖುದ್ದು ವೀಕ್ಷಣೆ ನಡೆಸಿದರು.

ಅಂಡಾಣುವಿನಲ್ಲಿ ನೀರು ತುಂಬಿದ ಚೀಲದ ಶಸ್ತ್ರಚಿಕಿತ್ಸೆಯನ್ನು ಯಶಸ್ವಿಯಾಗಿ ನೆರವೇರಿಸಿ ಆಗಮಿಸಿದ ಸ್ತ್ರೀ-ಪುರುಷ ವಿಭಾಗದ ಮುಖ್ಯಸ್ಥರಾದ ಡಾ.ರಾಧಾ ಸಂಘವಿ ನೇತೃತ್ವದ ಸಹ ಪ್ರಾಧ್ಯಾಪಕಿ ಡಾ.ಅನುಜಾ ಸಗಮನಕುಂಟಾ, ಅರವಳಿಕೆ ತಜ್ಞ ಡಾ.ಕಿರಣ್ ನಾಯಕ, ಡಾ.ಎಮ್.ಕೆ. ಪಾಟೀಲ್, ಶಸ್ತ್ರ ಚಿಕಿತ್ಸಾ ವಿಭಾಗದ ಪ್ರಭಾರ ಮುಖ್ಯಸ್ಥ ಅನಿಲಕುಮಾರ್, ಶುಶ್ರೂಷಕ ಅಧಿಕಾರಿ ಅನ್ನಪೂರ್ಣ, ಶಾಂಭವಿ, ಲಿಂಗರಾಜ್, ನಾರಾಯಣ ಅವರನ್ನೊಳಗೊಂಡ ತಂಡಕ್ಕೆ ಇದೆ ವೇಳೆ ಜಿಲ್ಲಾಧಿಕಾರಿಗಳು ಶುಭಾಶಯಗಳನ್ನು



ತಿಳಿಸಿದರು. ಇನ್ನು ಹೆಚ್ಚಿನ ಮಟ್ಟದಲ್ಲಿ ಇಂತಹ ಚಿಕಿತ್ಸೆಗಳನ್ನು ನಡೆಸುವಂತೆ ವೈದ್ಯಾಧಿಕಾರಿಗಳು ಮತ್ತು ವೈದ್ಯರು ಮತ್ತು ಸಿಬ್ಬಂದಿಗೆ ಜಿಲ್ಲಾಧಿಕಾರಿಗಳು ಸಲಹೆ ನೀಡಿದರು.

**ಸಾರ್ವಜನಿಕರಲ್ಲಿ ಮನವಿ:** ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯ ಅನುದಾನದಲ್ಲಿ, ಉನ್ನತ ಮಟ್ಟದ ಉದರ ದರ್ಶಕ ಯಂತ್ರೋಪಕರಣದ ಮೂಲಕ ಅಂಡಾಣುವಿನಲ್ಲಿ ನೀರು ತುಂಬಿದ ಚೀಲದ ಶಸ್ತ್ರ ಚಿಕಿತ್ಸೆಯನ್ನು ಜಿಲ್ಲೆಯಲ್ಲಿ ಮೊದಲ ಬಾರಿಗೆ ಯಶಸ್ವಿಯಾಗಿ ನಡೆಸಲಾಗಿದೆ. ಇಂತಹ ಪ್ರಯತ್ನದಿಂದ ಮತ್ತು ಯಶೋಗಾಥೆಯಿಂದ ವೈದ್ಯರಲ್ಲಿ ಮತ್ತು ರೋಗಿಗಳಲ್ಲಿ ಆತ್ಮವಿಶ್ವಾಸ ಹೆಚ್ಚುತ್ತದೆ. ಇಂತಹ ವಿಶೇಷತೆಗಳಿಂದ ರಿಮ್ಸ್ ಆಸ್ಪತ್ರೆಯು ಹೆಸರಾಗುತ್ತಿದೆ.

ವಿಶೇಷವಾದ ವೈದ್ಯಕೀಯ ಸೌಕರ್ಯವಿರುವ ರಿಮ್ಸ್ ಆಸ್ಪತ್ರೆಗೆ ಸಾರ್ವಜನಿಕರು ಆಗಮಿಸಿ ವೈದ್ಯಕೀಯ ಸೌಕರ್ಯದ ಸದುಪಯೋಗ ಪಡೆದುಕೊಳ್ಳಬೇಕೆಂದು ಇದೆ ವೇಳೆ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಅವರು ಜಿಲ್ಲೆಯ ಸಾರ್ವಜನಿಕರಲ್ಲಿ (2ನೇ ಪುಟಕ್ಕೆ)

## ವಿಕಲಚೇತನರ ಸಮಸ್ಯೆಗಳಿಗೆ ಸ್ಪಂದಿಸದ ತಾಲೂಕು ಆಡಳಿತ ವೆಂಕೋಬ ನಾಯಕ

ಯುವ ಮಾರ್ಗ ಸುದ್ದಿ

**ದೇವದುರ್ಗ,ಜು.25–** ಸ್ಥಳೀಯ ವಿಧಾನಸಭಾ ಕ್ಷೇತ್ರದಲ್ಲಿ ವಿಕಲಚೇತನರ ಸಮಸ್ಯೆಗಳಿಗೆ ತಾಲೂಕು ಆಡಳಿತ ಸ್ಪಂದಿಸದೇ ಇರುವದು ವಿಷಾದನೀ ಸಂಗತಿ ಹೀಗಾಗಿ ಮೂಲಭೂತ ಸೌಲಭ್ಯ ಗಳಿಂದ ವಂಚಿತಗೊಂಡಿದ್ದಾರೆ ಎಂದು ತಾಲೂಕು ವಿಕಲಚೇತನರ ಹಾಗೂ ಪಾಲಕರ ಒಕ್ಕೂಟದ ತಾಲೂಕು ಅಧ್ಯಕ್ಷ ವೆಂಕೋಬ ನಾಯಕ ಹೇಳಿದರು.

ಅವರು ಪಟ್ಟಣದ ಪ್ರವಾಸಿ ಮಂದಿರದಲ್ಲಿ ಬುಧವಾರದಂದು ಸುದ್ದಿಗಾರರೊಂದಿಗೆ ಮಾತನಾಡಿ ವಿಕಲಚೇತನರ ಕುಂದುಕೊರತೆಯ ಸಭೆ ಕರೆಯಬೇಕಂಬ ನಿಯಮವಿದೇ ಆದರೆ ದೇವದುರ್ಗ ತಾಲೂಕಿನಲ್ಲಿ ಇಲಿಯವರೆಗೂ ಯಾವುದೇ ಸಭೆ ಮಾಡಿದೆ ನಮ್ಮ ತಾಲೂಕಿನಲ್ಲಿ ಯಾವುದೇ ಪೂರ್ವ ಭಾವಿ ಸಭೆ ಮಾಡಿಲ್ಲ, ವಿಕಲಚೇತನರಿಗೆ ಪಾಲನೆಯಗಬೇಕಾದ ನಿಯಮಗಳು ಪಾಲನೆ



ಯಾಗುತ್ತಿಲ್ಲ ಗ್ರಾಪಂಗಳು ಒಳಗೊಂಡಂತೆ, ವಿವಿಧ ಇಲಾಖೆ ಗಳಿಗೆ ಬರುವ ಅನುದಾನದಲ್ಲಿ ಶೇ.5ರಷ್ಟು ಅನುಧಾನ ವಿಕಲಚೇತನರಿಗೆ ಮೀಸಲು ಇದ್ದು ಯಾವುದೇ ಪ್ರಯೋಜನ

ಜಾರಿಗೊಳ್ಳುತ್ತಿಲ್ಲ ಹೀಗಾಗಿ ಅನೇಕ ಬಾರಿ ದೂರು ನೀಡಿದ್ದು ಯಾವುದೇ ಪ್ರಯೋಜನ ಆಗದೆ ಅನುಧಾನ ದುರ್ಬಳಕೆಯಾಗಿದೆ. ವಿಕಲಚೇತನರ ಸಮಸ್ಯೆಗಳಿಗೆ ಪರಿಹಾರ ನೀಡಬೇಕಾದ ಅಧಿಕಾರಿಗಳೇ ಸೌಲಭ್ಯಗಳ ಕುರಿತು, ಸಭೆ ಕರೆಯಬೇಕು ಆದರೆ ಇಲ್ಲಿಯವರೆಗೆ ಯಾವುದೇ ಸಭೆ ನಡೆಸದೆ ತಹಸೀಲ್ದಾರ್ ಕಾಲಹರಣ (2ನೇ ಪುಟಕ್ಕೆ)

## ಜಿಲ್ಲಾ ಮಟ್ಟದ ವಾರ್ಷಿಕ ಪ್ರಶಸ್ತಿಗೆ ಸ್ಟಾರ್ ಆಫ್ ರಾಯಚೂರು ವರದಿಗಾರ ನವೀನ್ ಕುಮಾರ್ ಆಯ್ಕೆ

ಯುವ ಮಾರ್ಗ ಸುದ್ದಿ

**ಮಾನ್ವಿ,ಜು.25–** ಜಿಲ್ಲಾ ಮಟ್ಟದ ಪತ್ರಿಕಾ ದಿನಾಚರಣೆಯ ಅಂಗವಾಗಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದಿಂದ ಕೊಡಮಾಡುವ ಜಿಲ್ಲಾ ಮಟ್ಟದ ವಾರ್ಷಿಕ ಪ್ರಶಸ್ತಿಗೆ ಮಾನವಿ ತಾಲೂಕು ಸ್ಟಾರ್ ಆಫ್ ರಾಯಚೂರು ದಿನ ಪತ್ರಿಕೆಯ ವರದಿಗಾರ ನವೀನ್ ಕುಮಾರ್ ಅವರು ಆಯ್ಕೆಯಾಗಿದ್ದಾರೆ.

ಪತ್ರಕರ್ತ ನವೀನ್ ಕುಮಾರ್ ರವರು ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ನವಚೇತನ ಶಾಲೆ ಕವಿತಾಳ,ಪಿಯು ವಿದ್ಯಾಭ್ಯಾಸ ಎಲ್ ವಿ ಡಿ ಕಾಲೇಜು ರಾಯಚೂರು, ಪದವಿ ಶಿಕ್ಷಣ ಸ್ಪಿಲ್ ಕಾಲೇಜು ರಾಯಚೂರು, ಎಂ ಎ ಪತ್ರಿಕೋದ್ಯಮ ಬೆಂಗಳೂರು ವಿಶ್ವವಿದ್ಯಾಲಯ, ಬಿ ಇಡಿ ಶಿಕ್ಷಣ ಕೊಪ್ಪಳದಲ್ಲಿ ಮುಗಿಸಿ ಪ್ರಸ್ತುತ ಕೋನಾಪುರ ಪೇಟೆ ಪ್ರೌಢಶಾಲೆಯಲಿ ಕಳೆದ 10 ವರ್ಷಗಳಿಂದ ಇಂಗ್ಲಿಷ್ ಭಾಷೆಯ ಅತಿಥಿ ಶಿಕ್ಷಕನಾಗಿ ಹಾಗೂ ಕಳೆದ 10 ವರ್ಷಗಳಿಂದ ಸ್ಟಾರ್ ಆಫ್ ರಾಯಚೂರು ದಿನ ಪತ್ರಿಕೆಯ ವರದಿಗಾರನಾಗಿ ಸೇವೆ ಸಲ್ಲಿಸುತ್ತಿದ್ದಾರೆ. ಜು. 27 ರಂದು ಲಿಂಗಸಗೂರಿ ನಲ್ಲಿ ಆಯೋಜಿಸಲಾಗಿರುವ ಜಿಲ್ಲಾ ಮಟ್ಟದ ಪತ್ರಿಕಾ ದಿನಾಚರಣೆ ಹಾಗೂ ಪ್ರಶಸ್ತಿ ಪ್ರಧಾನ ಸಮಾರಂಭದಲ್ಲಿ ನವೀನ ಕುಮಾರ್ ಅವರಿಗೆ ಜಿಲ್ಲಾ ಉತ್ತಮ ಪತ್ರಕರ್ತ ವಾರ್ಷಿಕ ಪ್ರಶಸ್ತಿ ನೀಡಿ ಗೌರವಿಸಲಾಗುತ್ತದೆ.

ಕಾರ್ಯನಿರತ ಪತ್ರಕರ್ತರ ಸಂಘ ರಾಯಚೂರು ಹಾಗೂ ತಾಲೂಕು ಘಟಕ ಲಿಂಗಸಗೂರು ಇವರ ಸಹಯೋಗದಲ್ಲಿ ನಡೆಯುವ ಜಿಲ್ಲಾ ಪತ್ರಿಕಾ ದಿನಾಚರಣೆ ಮತ್ತು ಪ್ರಶಸ್ತಿ ಪ್ರಧಾನ ಸಮಾರಂಭವನ್ನು ವೈದ್ಯಕೀಯ ಹಾಗೂ ಉನ್ನತ ಶಿಕ್ಷಣ, ಮತ್ತು ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಶರಣ ಪ್ರಕಾಶ ಪಾಟೀಲ್ ಉದ್ಘಾಟಿಸಲಿದ್ದು, ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ. ಎಸ. ಬೋಸರಾಜು ಅವರು ಪ್ರಶಸ್ತಿ



ಪ್ರಧಾನ ಮಾಡಲಿದ್ದಾರೆ.

ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷರಾದ ಶಿವಾ ನಂದ ತಗಡೂರು, ಜಿಲ್ಲಾಧ್ಯಕ್ಷರಾದ ಆರ. ಗುರುನಾಥ ಸೇರಿದಂತೆ ಸಂಸದರು, ಶಾಸಕರು, ಜಿಲ್ಲೆಯ ಎಲ್ಲಾ ಪತ್ರಕರ್ತರು ಭಾಗವಹಿಸಲಿದ್ದಾರೆ.

## ಅರಕೇರಾ ಪಟ್ಟಣದ ಖಾಸಗಿ ರಸಗೊಬ್ಬರ ಮಾರಾಟ ಮಳಿಗೆಗೆ ಕೃಷಿ ಇಲಾಖೆ ಸಹಾಯಕ ನಿರ್ದೇಶಕ ಶ್ರೀನಿವಾಸ ಭೇಟಿ



ಯುವ ಮಾರ್ಗ ಸುದ್ದಿ

**ಅರಕೇರಾ,ಜು.25–** ರಸಗೊಬ್ಬರ ಕೃತಕ ಅಭಾವ ಸೃಷ್ಟಿಸಿ ರೈತರನ್ನು ಸಂಕಷ್ಟಕ್ಕೆ ಸಿಲುಕಿಸಬಾರದು ಎಂದು ಕೃಷಿ ಇಲಾಖೆ ಸಹಾಯಕ ನಿರ್ದೇಶಕ ಶ್ರೀನಿವಾಸ ನಾಯಕ ಹೇಳಿದರು.

ಪಟ್ಟಣದ ರಸಗೊಬ್ಬರ ಮಾರಾಟ ಕೇಂದ್ರಗಳಿಗೆ ಭೇಟಿ ನೀಡಿ ಮಾರಾಟಗಾರರಿಗೆ ಸೂಚನೆ ನೀಡಿದರು. ತಾಲೂಕಿನಲ್ಲಿ ಉತ್ತಮ ಪ್ರಮಾಣದಲ್ಲಿ ವಿವಿಧ ಬೆಳೆಗಳ ಬಿತ್ತನೆ ಕಾರ್ಯ ನಡೆದಿದೆ. ರೈತರಿಗೆ ಅಗತ್ಯವಿರುವ ರಸಗೊಬ್ಬರ ಮಾರಾಟ ಮಾಡಬೇಕು. ರಸಗೊಬ್ಬರವನ್ನು ಗೌಪ್ಯವಾಗಿ ಸಂಗ್ರಹಿಸಿ ಹೆಚ್ಚಿನ ಎಂ.ಆರ್.ಪಿ ದರಕ್ಕಿಂತ ಹೆಚ್ಚಿನ ದರದಲ್ಲಿ ಮಾರಾಟ ಮಾಡುವುದು ಕಂಡು ಬಂದರೆ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದರು.

ರೈತರ ಬೇಡಿಕೆಗೆ ಅನುಗುಣವಾಗಿ ರಸಗೊಬ್ಬರಗಳನ್ನು ನೀಡಬೇಕು. ಒತ್ತಾಯ ಪೂರ್ವಕವಾಗಿ ವಲ್ಲದ (2ನೇ ಪುಟಕ್ಕೆ)

## ವಾರ್ಡ್ ನಂ. 12 ಉಪಚುನಾವಣೆ ಮತದಾರ ಪಟ್ಟಿ ಪರಿಷ್ಕರಣೆ ಎರಡು ದಿನದಲ್ಲಿ ದೋಷ ಸರಿಪಡಿಸಿ – ಅಶೋಕ ಪವಾರ

ಯುವ ಮಾರ್ಗ ಸುದ್ದಿ


**ಸಿರವಾರ, ಜು.25–** ಪಟ್ಟಣ ಪಂಚಾಯತಿಯ ವಾರ್ಡ ನಂ 12 ಸದಸ್ಯರು ನಿಧನರಾದ ಹಿನ್ನೆಲೆಯಲ್ಲಿ ತೇರವಾದ ಆ ಸ್ಥಾನಕ್ಕೆ ಉಪಚುನಾವಣೆ ಘೋಷಣೆಯಾಗಿದ್ದೂ, ಮತದಾರ ಪಟ್ಟಿಯನ್ನು ಸಿದ್ದಪಡಿಸಲಾಗಿದೆ. ಲೋಪದೋಷಗಳು ಇದರೆ ಎರಡು ದಿನಗಳಲ್ಲಿ ಸರಪಡಿಸಲಾಗುವುದು ಎಂದು ತಹಸೀಲ್ದಾರ ಹಾಗೂ ತಾಲೂಕ ದಂಡಾಧಿಕಾರಿ ಅಶೋಕ ಪವಾರ ಹೇಳಿದರು. ಪಟ್ಟಣದ ತಹಸೀಲ್ದಾರ ಕಛೇರಿಯಲ್ಲಿ ವಿವಿಧ ಪಕ್ಷದ ಮುಖಂಡರ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ವಾರ್ಡ ನಂ12 ಉಪಚುನಾವಣೆ ಹಿನ್ನೆಲೆಯಲ್ಲಿ ಹಿಂದಿನ ಮತದಾರ ಪಟ್ಟಿ ಈಗಿನ ಪಟ್ಟಿಯನ್ನು ನೋಡಿ ಕೇಲವೊಂದು ಮತದಾರರು ಎರಡು ಕಡೆ ಓಟಿಂಗ್ ಹಕ್ಕು ಇಟ್ಟು-ಕೊಂಡಿದ್ದಾರೆ. ಮದುವೆಯಾಗಿ ಹೋಗಿದ್ದಾರೆ. ಮರಣ ಹೊಂದಿದ್ದಾರೆ. ಅಂತವುಗಳನ್ನು ತೆಗೆದು ಹಾಕಿ ಒಂದೇ ಕಡೆ ಮತದಾನಕ್ಕೆ ಅವಕಾಶ ನೀಡಲಾಗುವುದು. ರಾಜಕೀಯ ಪಕ್ಷ ಮುಖಂಡರು, ಸಾರ್ವಜನಿಕರು ತಿಳಿಸಿದರೆ ಅಂತವುಗಳನ್ನು ಪಟ್ಟಿಯಿಂದ ತೆಗೆಯಲಾಗುವುದು. ಮದುವೆಯಾಗಿ ಇಲಿಗೆ ಬಂದಿದರೆ ಅವುಗಳನ್ನು ಸೇರ್ಪಡೆಗೆ ಅವಕಾಶನೀಡಲಾಗುವುದು. ಪಕ್ಷದ ಮುಖಂಡರಿಗೆ ಮತದಾರ ಪಟ್ಟಿಯನ್ನು ನೀಡಲಾಗುವುದು ಅಂತವುಗಳನ್ನು ಸೇರ್ಪಡೆ ಮಾಡಲಾಗುವುದು ಎಂದರು.ಈಸಂದರ್ಭದಲ್ಲಿ ಪ.ಪಂಮುಖ್ಯಾಧಿಕಾರಿ ತಿಮ್ಮಪ್ಪ ಜಗ್ಗಿ, ಶಿರಸ್ತಾರ ವಾಸವಿ, ಕಂದಾಯ ನಿರೀಕ್ಷಕ ಶ್ರೀನಾಥ, ವಿಎ ವಿಲ್ಸನ್, ಪ.ಪಂಚಾಯತಿ ಅಧ್ಯಕ್ಷ ವೈ.ಭೂಪನಗೌಡ, ಕಾಂಗ್ರೆಸ್ ಮಹಿಳಾ ಘಟಕ ಅಧ್ಯಕ್ಷ ರೇಣಿಕಾ, ಪ.ಪಂಚಾಯತಿ ಸದಸ್ಯ ಸೂರಿ ದುರುಗಣ್ಣನಾಯಕ, ಹಾಜಿಚೌದ್ರಿ, ಮಾಜಿ ಉಪಾದ್ಯಕ್ಷ ಚನ್ನಬಸವ ಗಡ್ಡ, ಲಕ್ಷ್ಮೀಕಾಂತ, ವಿನಾಯಕ, ಮಾರೆಪ್ಪ, ಶಾಂತಪ್ಪ ಪಿತಗಲ್, ರಮೇಶ ಸೇರಿದಂತೆ ಇನ್ನಿತರರು ಇದ್ದರು.

## ತಡಕಲ್ ಗ್ರಾಮದ ಆಶ್ರಯ ಮನೆಗಳಗೆ ಹಾದು ಹೋಗಲು ರಸ್ತೆ ಕಲ್ಪಿಸುವಂತೆ ಮನವಿ

ಯುವ ಮಾರ್ಗ ಸುದ್ದಿ

**ಮಾನ್ವಿ,ಜು.25–** ತಾಲೂಕಿನ ತಡಕಲ್ ಗ್ರಾಮದ ಸ.ನಂ:8 ರಲ್ಲಿ ಸರಕಾರದ ವತಿಯಿಂದ ಸುಮಾರು 30 ಕುಟುಂಬ ಗಳಿಗೆ ಆಶ್ರಯ ಮನೆಗಳನ್ನು ಸುಮಾರು 20-22 ವರ್ಷಗಳ ಹಿಂದೆ ಮಂಜೂರು ಮಾಡಲಾಗಿರುತ್ತದೆ, ಆದರೆ ಆಶ್ರಯ ಮನೆಯ ನಿವಾಸಿಗಳಿಗೆ ಮನೆಗಳಿಗೆ ಹೋಗಲು ರಸ್ತೆಯೇ ಇರುವುದಿಲ್ಲ ಅದರಿಂದ ಅಶ್ರಯ ಮನೆಗಳಿಗೆ ದಾರಿ ಕಲ್ಪಿಸುವಂತೆ ತಾಲೂಕಾ ಸಿಪಿಎಂಲ್ ವತಿಯಿಂದ ಶುಕ್ರವಾರ ತಾಲೂಕಾ ದಂಡಾಧಿಕಾರಿಗಳಿಗೆ ಮನವಿ ಸಲ್ಲಿಸಿದರು.

ಸಿಪಿಎಂ ಎಲ್ ತಾಲೂಕಾ ಕಾರ್ಯದರ್ಶಿ ಯಲ್ಲಪ್ಪ ಉಟಕನೂರು ಮಾತನಾಡಿ ಅಶ್ರಯ ಮನೆಗಳಿಗೆ ಹೋಗಬೇಕಾದರೆ ವಯಸ್ಕರಿಗೆ, ವಿದ್ಯಾಭ್ಯಾಸ ಮಾಡುವ ವಿದ್ಯಾರ್ಥಿಗಳಿಗೆ, ಮಹಿಳೆಯರು ತಿರುಗಾ



ಡಲು ತೊಂದರೆಯಾಗುತ್ತಿದೆ, ಹಾಗೂ ಅಕ್ಕ ಪಕ್ಕದ ಜಮೀನಿನ ಮಾಲೀಕರು ತಮ್ಮ ಜಮೀನಿನ ಮುಖಾಂತರ ಹಾದು ಹೋಗಲು ನಿರಾಕರಿಸುತ್ತಿದ್ದಾರೆ. ಇದರಿಂದ ಸುಮಾರು 30 ಕುಟುಂಬಗಳಿಗೆ ದಾರಿ ಇಲ್ಲದರಿಂದ ನಿತ್ಯ ಕಷ್ಟದಲ್ಲಿರುತ್ತಾರೆ. ಇದರ ಸಂಬಂಧ ಸಾಕಷ್ಟು ಸಲ ಮೌಖಿಕವಾಗಿ ಸಂಬಂಧಪಟ್ಟ ಅಧಿಕಾರಿಗಳ ಗಮನಕ್ಕೆ ತಂದರು ಯಾವುದೇ ಪ್ರಯೋಜನ ಆಗಿರುವುದಿಲ್ಲ. ಸದರಿ ನಿವೇಶಗಳನ್ನು ಎಲ್ಲಾ ವರ್ಗದವರು ವಾಸಿಸುತ್ತಿದ್ದು, ಎಲ್ಲರೂ ಬಡ ಕೂಲಿ ಕಾರ್ಮಿಕರು ಇದ್ದು ನಿತ್ಯ ಕೂಲಿ ಕಸಬು ಮಾಡಿಕೊಂಡು ಉಪಜೀವಿಸುತ್ತಿದ್ದು ನಿತ್ಯ ತಿರುಗಾಡಲು ರಸ್ತೆಯ ಅತ್ಯವಶ್ಯಕತೆ ಇರುತ್ತದೆ, ಹಾಗೂ ವಿಶೇಷವಾಗಿ ರೋಗಿಗಳಿಗೆ ಮತ್ತು ಗರ್ಭಿಣಿ ಮಹಿಳೆಯರಿಗೆ ಕಷ್ಟದ ಸಮಯದಲ್ಲಿ ಆಸ್ಪತ್ರೆಗೆ ಹೋಗಲು ತೂಂದರೆ ಅನುಭವಿಸುತ್ತಿದ್ದಾರೆ. ಆದ್ದರಿಂದ (2ನೇ ಪುಟಕ್ಕೆ)

## ಕೆಪಿಎಂಇ ಕಾಯ್ದೆ ಉಲ್ಲಂಘನೆ: ರಾಯಚೂರ ಜಿಲ್ಲೆಯ ಅನಧಿಕೃತ 19 ಖಾಸಗಿ ಆಸ್ಪತ್ರೆ, ಸಂಸ್ಥೆಗಳಿಗೆ ದಂಡ

ಯುವ ಮಾರ್ಗ ಸುದ್ದಿ

**ರಾಯಚೂರು,ಜು.24–** ರಾಯಚೂರ ಜಿಲ್ಲೆಯಲ್ಲಿ ಕೆ.ಪಿ.ಎಂ.ಇ ಕಾಯ್ದೆಯನ್ನು ಉಲ್ಲಂಘನೆ ಮಾಡಿರುವ ಖಾಸಗಿ ಆಸ್ಪತ್ರೆಗಳಿಗೆ ದಂಡ ವಿಧಿಸಿದ್ದು, ನಿಗದಿತ ಅವಧಿಯೊಳಗೆ ದಂಡ ಭರಿಸದೇ ಇದ್ದ ಪಕ್ಷದಲ್ಲಿ ನಿಯಮಾನುಸಾರ ಕಾನೂನಿನ ಕ್ರಮ ಕೈಗೊಳ್ಳಲಾಗುವುದು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿಗಳಾದ ಡಾ.ಸುರೇಂದ್ರಬಾಬು ಅವರು ಎಚ್ಚರಿಕೆ ನೀಡಿದ್ದಾರೆ.

ದೇವದುರ್ಗ ತಾಲೂಕಿನ ನಿಷಾ ಕ್ಲಿನಿಕ್ 50 ಸಾವಿರ ರೂ ದಂಡ. ನ್ಯೂ ಇರ್ಫಾನ್ ಕ್ಲಿನಿಕ್‌ಗೆ 25 ಸಾವಿರ ರೂ. ದಂಡ, ಶ್ರೀಬಸವಾ ಇಮೇಜಿಂಗ್ ಸೆಂಟರ್‌ಗೆ 25 ಸಾವಿರ ರೂ ದಂಡ, ಶ್ರೀಬಸವ ಲ್ಯಾಬ್ ಎಕ್ಸರೆ & ಇಸಿಜಿ ಸೆಂಟರ್‌ಗೆ 25 ಸಾವಿರ ರೂ. ದಂಡ, ದೇಸಾಯಿ ಕ್ಲಿನಿಕ್‌ಗೆ 15 ಸಾವಿರ ರೂ ದಂಡ, ಶ್ರೀದೇವಿ ಕ್ಲಿನಿಕ್‌ಗೆ 15 ಸಾವಿರ ರೂ. ದಂಡ, ಎಸ್.ಬಿ.ಆಸ್ಪತ್ರೆಗೆ 15 ಸಾವಿರ ರೂ ದಂಡ, ಬಾಬಾ ಡೈಗ್ನೋಷ್ಟಿಕೆ ಸೆಂಟರ್‌ಗೆ 50 ಸಾವಿರ ರೂ ದಂಡ, ಶ್ರೀಗುರು ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆಗೆ 25 ಸಾವಿರ ರೂ ದಂಡ ವಿಧಿಸಲಾಗಿದೆ.

ಅದೇ ರೀತಿ ಸಿರವಾರ ತಾಲೂಕಿನ ಅಮೃತ ಕ್ಲಿನಿಕ್‌ಗೆ 15 ಸಾವಿರ ರೂ ದಂಡ, ವಿಜಯ ಚಂದ್ರಶೇಖರ ಕ್ಲಿನಿಕ್‌ಗೆ 15 ಸಾವಿರ ರೂ ದಂಡ, ಶ್ರೀವೆಂಕಟೇಶ್ವರ ಕ್ಲಿನಿಕ್‌ಗೆ 40 ಸಾವಿರ ರೂ ದಂಡ ವಿಧಿಸಲಾಗಿದೆ.

ಲಿಂಗಸುಗೂರು ತಾಲೂಕಿನ ಘನಶ್ರೀ ಲ್ಯಾಬ್‌ಗೆ 50 ಸಾವಿರ ರೂ ದಂಡ, ಅನ್ನಪೂರ್ಣ ಲ್ಯಾಬ್‌ಗೆ 50 ಸಾವಿರ ರೂ ದಂಡ, ಮೆಡಿಕೇರ್ ಲ್ಯಾಬ್‌ಗೆ 15 ಸಾವಿರ ರೂ ದಂಡ, ವಿಜಯ ಕ್ಲಿನಿಕ್‌ಗೆ 15 ಸಾವಿರ ರೂ ದಂಡ ವಿಧಿಸಲಾಗಿದೆ. ಅದೇ ರೀತಿ ರಾಯಚೂರು ತಾಲೂಕಿನ ಪೀಸ್ ಹೆಲ್ತ್ ಕೇರ್‌ಗೆ 25 ಸಾವಿರ ರೂ ದಂಡ, ಶ್ರೀಸೂಗೂರೇಶ್ವರ ಕ್ಲಿನಿಕ್‌ಗೆ 50 ಸಾವಿರ ರೂ ದಂಡ ಹಾಗೂ ಮಾನವಿ ತಾಲೂಕಿನ ಪವನ್ ಕ್ಲಿನಿಕ್‌ಗೆ 15 ಸಾವಿರ ರೂ ದಂಡ ವಿದಿಸಲಾಗಿದೆ.

ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಇತ್ತೀಚೆಗೆ ಜುಲೈ 10ರಂದು ನಡೆದ ಜಿಲ್ಲಾಮಟ್ಟದ ಕೆಪಿಎಂಇ ನೋಂದಣಿ ಮತ್ತು ಕುಂದುಕೊರತೆ ಪ್ರಾಧಿಕಾರದ ಸಭೆಯಲ್ಲಿ ರಾಯಚೂರ ಜಿಲ್ಲೆಯಲ್ಲಿನ ಕೆಲವು ಖಾಸಗಿ ಕ್ಲಿನಿಕ್‌ಗಳು ಸಂಸ್ಥೆಗಳು ಕೆಪಿಎಂಇ ಕಾಯ್ದೆಯನ್ನು ಉಲ್ಲಂಘಿಸಿದ ಬಗ್ಗೆ ಚರ್ಚೆಯಾಗಿದ್ದು, ಈ ಸಭೆಯಲ್ಲಿ ಈ ಮೇಲಿನಂತೆ ಖಾಸಗಿ ಕ್ಲಿನಿಕ್‌ಗಳಿಗೆ ದಂಡ ವಿಧಿಸಲು ನಿರ್ಣಯಿಸಲಾಗಿದೆ. ಈ ಎಲ್ಲ ಕ್ಲಿನಿಕ್‌ಗಳು ಸಂಸ್ಥೆಗಳು ನಿಗದಿತ ಸಮಯದಲ್ಲಿ ದಂಡವನ್ನು ಪಾವತಿಸಬೇಕು. ವಿಳಂಬವಾದಲ್ಲಿ ಸೂಕ್ತ ರೀತಿಯ ಕ್ರಮಕೈಗೊಳ್ಳಲಾಗುತ್ತದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ

ಯುವ ಮಾರ್ಗ

ಶನಿವಾರ : 26–07–2025

## ಮೊದಲನೇಯ ಪುಟದಿಂದ

# ರಿಮ್ಸ್ ಆಸ್ಪತ್ರೆಯಲ್ಲಿ ಪ್ರಥಮ ಬಾರಿಗೆ ವಿಶೇಷ ಶಸ್ತ್ರ ಚಿಕಿತ್ಸೆ ಯಶಸ್ವಿ

ಮನವಿ ಮಾಡಿದರು. **ರಿಮ್ಸನಲ್ಲಿ ಉತ್ತಮ ಚಿಕಿತ್ಸೆ:** ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಅವರ ನಿರ್ದೇಶನದಂತೆ ಜುಲೈ 25ರಂದು ರಿಮ್ಸ್ ಆಸ್ಪತ್ರೆಯ ಸ್ತ್ರೀ–ಪುರುಷ ವಿಭಾಗದಲ್ಲಿ ವಿಶೇಷವಾದ ಶಸ್ತ್ರ ಚಿಕಿತ್ಸೆ ನಡೆಸಲಾಗಿದೆ. ಗುಣಮಟ್ಟ ಚಿಕಿತ್ಸೆ ಪಡೆಯಲು ಹೋದರೆ ಖಾಸಗಿ ಆಸ್ಪತ್ರೆಯಲ್ಲಿ ಕನಿಷ್ಠ ಒಂದರಿಂದ ಒಂದೂವರೆ ಲಕ್ಷ ರೂಪಾಯಿಗಳು ಖರ್ಚಾಗುತ್ತದೆ. ರಿಮ್ಸ್ ಆಸ್ಪತ್ರೆಯಲ್ಲಿ ಯಾವುದೇ ಶುಲ್ಕವಿಲ್ಲದೆ ಉಚಿತವಾಗಿ ಚಿಕಿತ್ಸೆ ನೀಡಲಾಗುತ್ತಿದೆ. ಸಾರ್ವಜನಿಕರು ಇಂತಹ ಸೇವೆಯನ್ನು ಪಡೆಯಬೇಕು. ಕನಿಷ್ಠ 10 ರಿಂದ 12 ಲಕ್ಷ ರೂಪಾಯಿ ವೆಚ್ಚವಾಗುವ ವಾಕ್ ಲ್ಯಾಂಡ್ ಚಿಕಿತ್ಸೆಯು ರಿಮ್ಸ್ ಆಸ್ಪತ್ರೆಯ ವಾಕ್ ಶ್ರಾವಣ ವಿಭಾಗದಲ್ಲಿ ಉಚಿತವಾಗಿ ಸಿಗಲಿದೆ. ಕಣ್ಣಿನ ವಿಭಾಗದಲ್ಲಿ ನಿರಂತರವಾಗಿ ಕಣ್ಣಿನ ತಪಾಸಣೆ ಮಾಡಲಾಗುತ್ತಿದೆ. ಸಾರ್ವಜನಿಕರು ತಮ್ಮ ಕಣ್ಣಿನ ಚಿಕಿತ್ಸೆಗೆ ರಿಮ್ಸ್ ಆಸ್ಪತ್ರೆಗೆ ಬಂದು ಅಂಧತ್ವ ನಿರ್ಮೂಲನೆಗೆ ಸಂಸ್ಥೆಯೊಂದಿಗೆ ಕೈಜೋಡಿಸಬೇಕು. ಇದಕ್ಕಾಗಿ ಪ್ರತಿ ಮೂರು ತಿಂಗಳಿಗೊಮ್ಮೆ ರೋಟರಿ ಹಾಗೂ ಲೈನ್ಸ್ ಕ್ಲಬ್ ವತಿಯಿಂದ ಕಣ್ಣಿನ ದೋಷದ ಲ್ಯಾನ್ಸ್ ಶಸ್ತ್ರಚಿಕಿತ್ಸೆ ಮಾಡಲಾಗುತ್ತಿದೆ ಎಂದು ಇದೆ ವೇಳೆ ರಿಮ್ಸ್ ಸಂಸ್ಥೆಯ ನಿರ್ದೇಶಕರಾದ ಡಾ.ಬಿ.ಹೆಚ್.ರಮೇಶ ಅವರು ಜಿಲ್ಲೆಯ ಸಾರ್ವಜನಿಕರಲ್ಲಿ ಮನವಿ ಮಾಡಿದರು.

ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಅವರು ರಿಮ್ಸ್ ಸಂಸ್ಥೆಗೆ ನಿಯಮಿತವಾಗಿ ಭೇಟಿ ನೀಡಿ ಇಲ್ಲಿನ ವೈದ್ಯಾಧಿಕಾರಿಗಳು ಮತ್ತು ತಜ್ಞವೈದ್ಯರೊಂದಿಗೆ ನಿರಂತರವಾಗಿ ಸಭೆ ನಡೆಸಿ ಮಾರ್ಗದರ್ಶನ ನೀಡುತ್ತಿದ್ದು, ಇದರಿಂದಾಗಿ ಹೊಸ ಹೊಸ ಸೌಕರ್ಯ ಪಡೆಯುತ್ತ ರಿಮ್ಸ್ ಆಸ್ಪತ್ರೆಯ ಸಾಮರ್ಥ್ಯ ಬಲಗೊಳ್ಳುತ್ತಿದೆ. ಮುಂದಿನ ದಿನಗಳಲ್ಲಿ ಇನ್ನು ಹೊಸ ಹೊಸ ಉಪಕರಣಗಳು ಬರಲಿವೆ. ಇದು ನಮಗೆ ಸಂತಸದ ಸಂಗತಿಯಾಗಿದೆ ಎಂದು ಇದೆ ವೇಳೆ ಡಾ.ಬಿ.ಹೆಚ್.ರಮೇಶ ಅವರು ಸಂತಷ ವ್ಯಕ್ತಪಡಿಸಿದರು. ರಿಮ್ಸನ ಶಸ್ತ್ರ ಚಿಕಿತ್ಸಾ ವಿಭಾಗದಲ್ಲಿ ಕೀಲು ಬದಲಾವಣೆ, ಅರ್ಥಸ್ಕೋಪ್, ಬೆನ್ನು ನರರೋಗದ ದೌರ್ಬಲ್ಯ, ಉದರಕ್ಕೆ ಸಂಬಂಧಿಸಿದಂತೆ ಕ್ಯಾಸ್ಕೋ ಚಿಕಿತ್ಸೆಗಳನ್ನು ಗುಣಮಟ್ಟದ ರೀತಿಯಲ್ಲಿ, ಸಂಸ್ಥೆಯ ನುರಿತ ತಜ್ಞರು ಹಾಗೂ ಓಪೆಕ್ ಆಸ್ಪತ್ರೆ ಸಹಯೋಗದೊಂದಿಗೆ ಮಾಡಲಾಗುತ್ತಿದೆ. ಜಿಲ್ಲೆಯ ಸಾರ್ವಜನಿಕರು ಈ ಸೇವೆಗಳನ್ನು ಉಚಿತವಾಗಿ ಹೆಚ್ಚಿನ ಮಟ್ಟದಲ್ಲಿ ಪಡೆದುಕೊಳ್ಳಬೇಕು. ಆರ್ಥಿಕ ಹೊರೆಯನ್ನು ಕಡಿಮೆ ಮಾಡಿಕೊಳ್ಳಬೇಕು ಎಂದು ಇದೆ ವೇಳೆ ಜಿಲ್ಲಾ ಶಸ್ತ್ರ ಚಿಕಿತ್ಸಕರಾದ ಡಾ.ವಿಜಯಶಂಕರ ನವಸುಂಡಿ ಅವರು ತಿಳಿಸಿದರು. ಇದೇ ಸಂದರ್ಭದಲ್ಲಿ ರಿಮ್ಸ್ ಸಂಸ್ಥೆಯ ಔಷಧ ವಿಭಾಗದ ಮುಖ್ಯಸ್ಥರಾದ ಡಾ.ಬಾಸ್ಕರ್ ರಾವ್ ಹಾಗೂ ಆಸ್ಪತ್ರೆಯ ಇನ್ನಿತರ ವೈದ್ಯರು ಮತ್ತು ಸಿಬ್ಬಂದಿ ಇದ್ದರು.

# ವಿಕಲಚೇತನರ ಸಮಸ್ಯೆಗಳಿಗೆ ಸ್ಪಂದಿಸದ ತಾಲೂಕು ಆಡಳಿತ ವೆಂಕೋಬ ನಾಯಕ

ಮಾಡುತ್ತಿದ್ದಾರೆ ಕೆಲ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ಮಾತ್ರ ವಿಕಲಚೇತನರಿಗೆ ಮೂಲ ಸೌಲಭ್ಯಗಳನ್ನು ತಲುಪಿಸಿದ್ದು ಇನ್ನೂ ಕೆಲ ಪಂಚಾಯತ್ ಪಿಡಿಓಗಳು ಹಾಗೂ ಕೆಲ ಪಂಚಾಯತ್ ಗಳಲ್ಲಿ ಇವರೆಗೂ ಯಾವುದೇ ಅನುಧಾನ ನೀಡದೆ ಸತಾಯಿಸುತ್ತಿದ್ದೂ, ಕೆಲ ಗ್ರಾಪಂಗಳಲ್ಲಿ ಮಾತ್ರ ನಿಗದಿಗೊಳಿಸಿದ ಅನುದಾನ ಬಳಕಯೋ ಆಗುತ್ತಿಲ್ಲ,

ಸ್ವಸಹಾಯ ಗುಂಪುಗಳನ್ನು ರಚನೆ ಮಾಡಿದ್ದು, ಕೆಲ ಗ್ರಾಪಂಗಳ ವ್ಯಾಪ್ತಿಯಲ್ಲಿ ಮಹಿಳೆಯರು ಸ್ವಸಹಾಯ ಗುಂಪುಗಳನ್ನು ರಚಿಸಿಕೊಂಡಿದ್ದರೂ, ಅನುದಾನ ನೀಡುತ್ತಿಲ್ಲ.ಕೆಲ ಗ್ರಾಮಗಳಲ್ಲಿ ಪಾಲಕರು ಸ್ವಂತ ಹಣದಿಂದ ಸೌಚಾಲಯಗಳನ್ನು ನಿರ್ಮಿಸಿಕೊಂಡಿದ್ದು, ಇವುಗಳ ಕುರಿತು ಅನೇಕ ಬಾರಿ ಮನವಿ ಕೊಟ್ಟರು ಸಹ ತಾಲೂಕು ಆಡಳಿಕ ವಿಕಲಚೇತನರ ಸಮಸ್ಯೆಗಳಿಗೆ ಸ್ಪಂದಿಸದೇ,ಸುಳ್ಳು ಅಶ್ವಾಸನೆ ನೀಡುತ್ತ ಕಾಲಹರಣ ಮಾಡುತ್ತಿದ್ದಾರೆ. ವಿವಿಧ ಭಾಗದಿಂದ ದೇವದುರ್ಗಕ್ಕೆ ಬರುವ ವಿಕಲಚೇರಿಗೆ ಹಾಗೂ ಪಾಲಕರಿಗೆ ಅನುಕೂಲ ಮಾಡಿಕೊಡುವ ಉದ್ದೇಶದಿಂದ ವಿಕಲಚೇತನರ ಮಾಹಿತಿ. ಕೇಂದ್ರ ಪ್ರಾರಂಭಿಸುವುದು ತುಂಬಾ ಅಗತ್ಯವಿದೆ. ಆದರೆ ಅನಿವಾರ್ಯವಾಗಿ ಪ್ರವಾಸಿ ಮಂದಿರ,ಎಪಿಎಂಸಿ ಆವರಣ,ಸಾರ್ವಜನಿಕ ಕ್ಲಬ್ ನಂತಹ ಜಾಗಗಳಲ್ಲಿ ಸಭೆ ನಡೆಸುತ್ತಿದ್ದೇವೆ. ಪ್ರತಿಧ್ವನಿ ವಿಕಲಚೇತನರ ಅಭಿವೃದ್ಧಿ ಸಂಸ್ಥೆಯ ಹಳೆ ಕಟ್ಟಡ ಶಿಥಿಲಗೊಂಡಿದ್ದು ಅದರ ಪುನರ್ ನಿರ್ಮಾಣದ ಅಗತ್ಯವಿದೆ. ಇಷ್ಟಲ್ಲದೇ ನಿಯೋಗವು ಈ ಸಂಸ್ಥೆಯ ಕಚೇರಿಗೆ ಅನುದಾನ ನೀಡಬೇಕೆಂದು ಒತ್ತು ನೀಡಿ ಸಂಸದರು, ವಿಧಾನ ಪರಿಷತ್ ಸದಸ್ಯರ ಬಳಿ ಹೋಗಲು ನಿರ್ಧರಿಸಲಾಗಿದೆ. ಈಗಾಗಲೇ ಶಾಸಕಿ ಕರೆಮ್ಮ ನಾಯಕ ರವರ ನೇತೃತ್ವದಲ್ಲಿ ಜರುಗಿದ ತ್ರೈಮಾಸಿಕ ಕೆಡಿಪಿ ಸಭೆಯಲ್ಲಿ ಈ ತಾಲೂಕು ಪಂಚಾಯತಿಯ ಆವರಣದಲ್ಲಿಯೇ ನಿವೇಶನ ಒದಗಿಸುವ ಭರವಸೆ ನೀಡಿದ್ದರು. ವಿಕಲಚೇತನರ ಮಾಹಿತಿ ಕೇಂದ್ರ ಕಟ್ಟಡ ನಿರ್ಮಿಸಲು 42 ಲಕ್ಷ ರೂ ಅನುಧಾನ ಕಾಯ್ದರಿಸಿದ್ದಾರೆ ಆದರೆ.ತಾ.ಪಂನವರು ನಿವೇಶನ ಕೊಡದಿರುವಕಾರಣ ಕಟ್ಟಡ ನಿರ್ಮಾಣ ವಿಳಂಬವಾಗುತ್ತಿದೆ. ಕೂಡಲೇ ಸಂಬಂಧಿಸಿದ ಮೇಲಧಿಕಾರಿಗಳು ಪ್ರತ್ಯೇಕ ಸಭೆ ಕರೆದು ವಿಕಲಚೇತನರ ಸಮಸ್ಯೆಗಳ ಕುರಿತು ಚರ್ಚಿಸಬೇಕು ಎಂದು ತಾಲೂಕು ವಿಕಲಚೇತನರ ಹಾಗೂ ಪಾಲಕರ ಒಕ್ಕೂಟದ ತಾಲೂಕು ಅಧ್ಯಕ್ಷ ವೆಂಕೋಬ ನಾಯಕ ಹೇಳಿದರು. ಈ ಸಂದರ್ಭದಲ್ಲಿ ವಿರುಪಾಕ್ಷಿ ದೇವದುರ್ಗ, ಡಾಕೋಜಿ ನಾಯ್ಕ್, ರಂಗಪ್ಪ ಕೆ. ಇರಬಗೇರಾ, ನಾಗರಾಜ ಸೇರಿದಂತೆ ಇತರರು ಇದ್ದರು

# ಅರಕೇರಾ ಪಟ್ಟಣದ ಖಾಸಗಿ ರಸಗೊಬ್ಬರ ಮಾರಾಟ ಮಳಿಗೆಗೆ ಕೃಷಿ ಇಲಾಖೆ ಸಹಾಯಕ ನಿರ್ದೇಶಕ ಶ್ರೀನಿವಾಸ ಭೇಟಿ

ರಸಗೊಬ್ಬರ, ಕ್ರಿಮಿನಾಶಕ ಮಾರಾಟ ಮಾಡಬಾರದು. ಸರ್ಕಾರ ನಿಗದಿಪಡಿಸಿದ ದರಪಟ್ಟಿಯನ್ನು ಮಾರಾಟ ಕೇಂದ್ರದಲ್ಲಿ ಹಾಕಬೇಕು. ಕಳಪೆ ಡಿಎಪಿ ರಸಗೊಬ್ಬರ ಕಂಡು ಬಂದರೆ ಕೂಡಲೇ ಕೃಷಿ ಇಲಾಖೆ ಗಮನಕ್ಕೆ ತರಬೇಕು. ರೈತರ ಪ್ರಗತಿಗೆ ಎಲ್ಲರೂ ಸಹಕರಿಸಬೇಕು. ಸರ್ಕಾರದ ಸೂಚನೆಗಳನ್ನು ನಿರ್ಲಕ್ಷ ವಹಿಸಿದವರ ವಿರುದ್ಧ ಕ್ರಿಮಿನಲ್ ಪ್ರಕರಣ ದಾಖಲಿಸಿ, ದಾಸ್ತಾನು ಸೀಜ್ ಮಾಡಲಾಗುವುದು ಎಂದು ಎಚ್ಚರಿಸಿದರು. ರೈತ ಸಂಘದ ತಾಲೂಕು ಅಧ್ಯಕ್ಷ ಹರ್ಷವರ್ಧನ ನಾಯಕ ದೊರೆ, ಜಿಲ್ಲಾ ಉಪಾಧ್ಯಕ್ಷ ಶ್ರೀಕಾಂತ ನಾಯಕ ಜಲ್ಲೆ, ಪ್ರಮುಖರಾದ ಹನುಮಗೌಡ ಚಡಕಲಗುಡ್ಡ, ಶಾಲಂ ಬಡಿಗೇರ, ರೆಡ್ಡಿ ಎಸ್ ನಾಯಕ ಇತರರಿದ್ದರು. ಅರಕೇರಾ ಪಟ್ಟಣದ ಖಾಸಗಿ ರಸಗೊಬ್ಬರ ಮಾರಾಟ ಮಳಿಗೆಗೆ ಕೃಷಿ ಇಲಾಖೆ ಸಹಾಯಕ ನಿರ್ದೇಶಕ ಶ್ರೀನಿವಾಸ ಭೇಟಿ ನೀಡಿ ಸೂಚನೆ ನೀಡಿದರು. ರೈತ ಸಂಘದ ತಾಲೂಕು ಅಧ್ಯಕ್ಷ ಹರ್ಷವರ್ಧನ ನಾಯಕ ದೊರೆ, ಜಿಲ್ಲಾ ಉಪಾಧ್ಯಕ್ಷ ಶ್ರೀಕಾಂತ ನಾಯಕ ಜಲ್ಲೆ, ಪ್ರಮುಖರಾದ ಹನುಮಗೌಡ ಚಡಕಲಗುಡ್ಡ, ಶಾಲಂ ಬಡಿಗೇರ, ರೆಡ್ಡಿ ಎಸ್ ನಾಯಕ ಇದ್ದರು.

# ತಡಕಲ್ ಗ್ರಾಮದ ಸರ್ವೆ ನಂ 8 ರಲ್ಲಿ ವಾಸಿಸುವ ಆಶ್ರಯ ಮನೆಗಳಗೆ ಹಾದು ಹೋಗುವ ರಸ್ತೆ ಕಲ್ಪಿಸುವಂತೆ ಮನವಿ

ಆಶ್ರಯ ಮನೆಗಳ ನಿವಾಸಿಗಳ ಕುಟುಂಬಗಳಿಗೆ ದಾರಿಯ ನಿಮಿತ್ಯ ಸಂಬಂಧಪಟ್ಟ ಅಧಿಕಾರಿಗಳಿಂದ ಸ್ಥಳ ವೀಕ್ಷಣೆ ಮಾಡಿ ವರದಿ ಪಡೆದುಕೊಂಡು ದಾರಿಯ ಅನುಕೂಲ ಮಾಡಿಕೊಡಬೇಕು.ಒಂದು ವೇಳೆ ನಿರ್ಲಕ್ಷ ಧೋರಣಿ ಅನುಸರಿಸಿ ಯಾವುದೇ ಕ್ರಮ ಕೈಗೊಳ್ಳದೇ ಹೋದಲ್ಲಿ ನಮ್ಮ ಸಿ.ಪಿ.ಎಂ.ಎಲ್ ವತಿಯಿಂದ ಉಗ್ರವಾದ ಧರಣಿ ಹಮ್ಮಿಕೊಳ್ಳಬೇಕಾಗುತ್ತದೆ ಮನವಿಯಲ್ಲಿ ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಸಿಪಿಎಂ ಎಲ್ ಸದಸ್ಯರಾದ ಪ್ರಕಾಶ ನಾಯಕ, ಮಲ್ಲಯ್ಯ ನಾಯಕ, ಮಹಂತೇಶ ನಾಯಕ, ರಾಮಕೃಷ್ಣ, ಬಸ್ಸಪ್ಪ ಚಲುವಾದಿ, ಸಣ್ಣ ಹುಲಿಗಪ್ಪ, ಹನುಮಂತ ಕೋಟ್ನೇಕಲ್, ರಮೇಶ ನಾಯಕ , ನಾಗರಾಜ ನಾಯಕ, ಯಂಕಪ್ಪ ನಾಯಕ, ಮಲ್ಲಯ್ಯ ತಡಕಲ್, ಯಂಕೋಬ ನಾಯಕ, ಗುರಪ್ಪ, ಹನುಮಂತ ಯಾದವ, ಶಿವರಾಜ ಯಾದವ ಇದ್ದರು.

# ಇಂದು ಬಸವ ಬೆಳಗು ಹಾಗೂ ಅಭಿನಂದನಾ ಸಮಾರಂಭ: ಸಿದ್ದಾರಾಮಯ್ಯಸ್ವಾಮಿ

**ಮಾನ್ವಿ,ಜು.25–** ಪಟ್ಟಣದ ಕಲ್ಮಠ ಗುರುಭವನದಲ್ಲಿ ಜೂಲೈ 26 ರಂದು ಬೆಳಿಗ್ಗೆ 11 ಕ್ಕೆ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಬೆಂಗಳೂರು ರಾಯಚೂರು ಜಿಲ್ಲಾ, ಮಾನ್ವಿ ತಾಲೂಕು ಘಟಕ ಹಾಗೂ ಮಾನ್ವಿ ಮಾಧ್ಯಮ ಸಮಿತಿ ಸಂಯುಕ್ತಾಶ್ರಯದಲ್ಲಿ ನಡೆಯುವ ಬಸವ ಬೆಳಗು ಹಾಗೂ ಅಭಿನಂದನಾ ಸಮಾರಂಭ ಕಾರ್ಯಕ್ರಮವನ್ನು ರಾಜ್ಯ ಸಣ್ಣ ನೀರಾವರಿ ಹಾಗೂ ವಿಜ್ಞಾನ ತಂತ್ರಜ್ಞಾನ ಸಚಿವ ಎನ್.ಎಸ್. ಬೋಸರಾಜು ಉದ್ಘಾಟಿಸಲಿದ್ದು. ವಳಬಳ್ಳಾರಿ ಸುವರ್ಣಗಿರಿ ಮಠದ ಶ್ರೀ ಸಿದ್ದಲಿಂಗ ಮಹಾಸ್ವಾಮಿಗಳು ಸೇರಿದಂತೆ ಜಿಲ್ಲೆಯ ವಿವಿಧ ಮಠಗಳ ಶ್ರೀಗಳು ದಿವ್ಯ ಸಾನಿಧ್ಯವನ್ನು ವಹಿಸಲಿದ್ದಾರೆ. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಅ.ಭಾ.ವೀ.ಲಿಂ.ಮಹಾಸಭಾ ಜಿಲ್ಲಾಧ್ಯಕ್ಷರಾದ ಚಂದ್ರಶೇಖರ ಮಿರ್ಜಾಪುರ್ ವಹಿಸಲಿದ್ದಾರೆ. ಪರಮೇಶ ಸಾಲಿಮಠ ವಿಶೇಷ ಉಪನ್ಯಾಸ ನೀಡಲಿದ್ದಾರೆ. ಜಿಲ್ಲೇಯ ಹಿರಿಯ ಶರಣ ಚಿಂತಕರು ,ಶರಣ ಸಾಹಿತಿ ಹಾಗೂ ಪತ್ರಿಕೋದ್ಯಮಿಗಳಾದ ಬಸವರಾಜ ಸ್ವಾಮಿ ಸುದ್ದಿಮೂಲ ಪತ್ರಿಕೆ ಸಂಸ್ಥಾಪಕರಿಗೆ ಜೀವಮಾನ ಸಾಧನೆಗಾಗಿ ವಿಶೇಷ ಸನ್ಮಾನ ಹಾಗೂ ಮಾನ್ವಿ ತಾಲೂಕಿನ ಹಿರಿಯ ವರದಿಗಾರರಾದ ಕಿಡಿಗಣಯ್ಯಸ್ವಾಮಿ,ಸಿದ್ದಾರಾಮಯ್ಯಸ್ವಾಮಿ,ಪಿ.ಪರಮೇಶ, ಶರಣಬಸವ ನೀರಮಾನ್ವಿ,ಬಸವರಾಜ ಭೋಗವತಿ ಹಾಗೂ ಪರಿಸರ ಮತ್ತು ವನ್ಯ ಜೀವಿ ಸಂರಕ್ಷಣೆಯಲ್ಲಿ ಕಳಕಳಿ ಹೊಂದಿರುವ ರಾಯಚೂರು ಪ್ರಾದೇಶಿಕ ವಲಯ ಅರಣ್ಯಧಿಕಾರಿ ರಾಜೇಶನಾಯಕ ಸೇರಿದಂತೆ ಜಿಲ್ಲೆಯಲ್ಲಿ ವಿವಿಧ ಕ್ಷೇತ್ರಗಳಲ್ಲಿ ಉತ್ತಮ ಸಾಧನೆಗೈದ ಸಾಧಕರಿಗೆ ಸನ್ಮಾನಿಸಿ ಗೌರವಿಸಲಾಗುವುದು ಚೈತನ್ಯಶ್ರೀ ಮಯೂರಿ ನೃತ್ಯ ಕಲಾ ತಂಡದ ಕಲಾವಿದರಿಂದ ನೃತ್ಯ ಪ್ರದರ್ಶನ, ಹಿರಿಯ ಸಂಗೀತ ಕಲಾವಿದರಾದ ಅಮರೇಶ ಸಾಲಿಮಠ ಕರೇಗುಡ್ಡ ರವರಿಂದ ಸಂಗೀತ ಗಾಯನ ಕಾರ್ಯಕ್ರಮ ನಡೆಯಲಿದೆ ಎಂದು ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಬೆಂಗಳೂರು ತಾ.ಅಧ್ಯಕ್ಷ ಅರುಣ ಚಂದಾ ಹಾಗೂ ತಾ. ಮಾಧ್ಯಮ ಸಮಿತಿಯ ಗೌರವಾಧ್ಯಕ್ಷರಾದ ಸಿದ್ದಾರಾಮಯ್ಯಸ್ವಾಮಿ ಪ್ರಕಟಣೆಯಲ್ಲಿ ಕೋರಿದ್ದಾರೆ.

# ವಿಷ ಆಹಾರ ಸೇವಿಸಿ ಅಸ್ವಸ್ಥಗೊಂಡ ಕುಟುಂಬಕ್ಕೆ ಶಿವರಾಜ್ ನಾಯಕ್ ಭೇಟಿ, ನೆರವಿನ ಹಸ್ತ

**ಯುವ ಮಾರ್ಗ ಸುದ್ದಿ**

**ಮಾನ್ವಿ,ಜು.25–** ರಾಯ ಚೂರು ಜಿಲ್ಲೆಯ ಮಾನ್ವಿ ವಿಧಾನಸಭಾ ಕ್ಷೇತ್ರದ ಕಡ್ಡೋಣಿ ತಿಮ್ಮಾಪುರ ಗ್ರಾಮದಲ್ಲಿ ಚೌಳೆ ಕಾಯಿ ಪಲ್ಯ ಸೇವಿಸಿ ಸಂಭವಿಸಿದ ದುರಂತದಲ್ಲಿ ಒಂದೇ ಕುಟುಂಬದ ಇಬ್ಬರು ಮಕ್ಕಳು ಮತ್ತು ತಂದೆ ಸಾವಿಗೀಡಾಗಿ ದ್ದು, ತಾಯಿ ಮತ್ತು ಇನ್ನಿಬ್ಬರು ಮಕ್ಕಳು ತೀವ್ರ ಅಸ್ವಸ್ಥರಾಗಿದ್ದಾರೆ. ಈ ಘಟನೆಗೆ ಸಂಬಂಧಿಸಿದಂತೆ, ಮಾನ್ವಿ ಶಾಸಕರಾದ ಹಂಪಯ್ಯ ನಾಯಕ್ ಸಾಹುಕಾರ್ ಅವರ ಅನುಪಸ್ಥಿತಿಯಲ್ಲಿ, ರಾಜ್ಯ ಸಚಿವರಾದ ಎನ್.ಎಸ್.ಬೋಸರಾಜು ಅವರ ಆದೇಶದ ಮೇರೆಗೆ ಶಾಸಕರ ಸುಪುತ್ರರಾದ ಶಿವರಾಜ್ ನಾಯಕ್ ವಕೀಲರು ಅವರು ಶುಕ್ರವಾರ ರಿಮ್ಸ್ ಆಸ್ಪತ್ರೆಗೆ ಭೇಟಿ



ನೀಡಿ ಕುಟುಂಬಕ್ಕೆ ಸಾಂತ್ವನ ಹೇಳಿ ನೆರವು ನೀಡಿದ್ದಾರೆ.

ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವ ತಾಯಿ ಪದ್ಮ ಮತ್ತು ಮಕ್ಕಳಾದ ಕೃಷ್ಣ ಹಾಗೂ ಚೈತ್ರ ಅವರ ಆರೋಗ್ಯ ವಿಚಾರಿಸಿದ ಶಿವರಾಜ್ ನಾಯಕ್ ಅವರು, ವೈಯಕ್ತಿಕವಾಗಿ ರೂ.5,000 ಪರಿಹಾರ ನೀಡಿದರು. ಅಲ್ಲದೆ, ಸಾವಿಗೀಡಾದವರ ಇಬ್ಬರು ಮಕ್ಕಳಿಗೆ ಉನ್ನತ ವಿದ್ಯಾಭ್ಯಾಸಕ್ಕಾಗಿ ಹಾಸ್ಟೆಲ್ ಸೌಲಭ್ಯ ಒದಗಿಸುವುದಾಗಿ ಭರವಸೆ ನೀಡಿದರು. ಗಾಯಾಳುಗಳಿಗೆ ಉತ್ತಮ ಚಿಕಿತ್ಸೆ ನೀಡುವಂತೆ ವೈದ್ಯರಿಗೆ ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ಅಹಿಂದ ಜಿಲ್ಲಾಧ್ಯಕ್ಷರಾದ ಬಸವರಾಜ್ ಕರಾಮಾಂಚಿ, ಮಾಜಿ ಗ್ರಾಮ ಪಂಚಾಯಿತಿ ಸದಸ್ಯರಾದ ಪರಮಣ್ಣ, ಮತ್ತು ಮಾಜಿ ಗ್ರಾಮ ಪಂಚಾಯಿತಿ ಅಧ್ಯಕ್ಷರಾದ ಹನುಮಂತ ಉಪಸ್ಥಿತರಿದ್ದರು.

# ಕೈಗಾರಿಕೋದ್ಯಮಿಗಳಿಗಾಗಿ ರಾಯಚೂರಲ್ಲಿ ಜುಲೈ 30ಕ್ಕೆ ವಿಶೇಷ ಕಾರ್ಯಕ್ರಮ: ಕಾಶಿಯಾ ಅಧ್ಯಕ್ಷ ಬಿ.ಆರ್.ಗಣೇಶ್ ರಾವ್

**ರಾಯಚೂರು,ಜು.25–** ಲೀನ್ ಯೋಜನೆ ಮತ್ತು ಝಡ್ಇಡಿ ಹಾಗೂ ರಫ್ತು ಕುರಿತು ಒಂದು ದಿನದ ಅರಿವು ಕಾರ್ಯಕ್ರಮವನ್ನು ರಾಯಚೂರು ಜಿಲ್ಲೆಯ ಕೈಗಾರಿಕೋದ್ಯಮಿಗಳಲ್ಲಿ ಅರಿವು ಮೂಡಿಸುವ ಸಲುವಾಗಿ ಜುಲೈ 30ರಂದು ಬೆಳಗ್ಗೆ 10 ಗಂಟೆಗೆ ಸ್ಟೇಷನ್ ರಸ್ತೆಯ ಅಜಾದ್ ನಗರದಲ್ಲಿ ಹೋಟೆಲ್ ರಂಜಿತಾ ಪ್ಯಾಲೆಸ್‌ನಲ್ಲಿ ಆಯೋಜಿಸಲಾಗಿದೆ.

ಕೈಗಾರಿಕಾ ಮತ್ತು ವಾಣಿಜ್ಯ ಇಲಾಖೆ, ಜಿಲ್ಲಾ ಕೈಗಾರಿಕಾ ಕೇಂದ್ರ ಮತ್ತು ವಿಶ್ವೇಶ್ವರಯ್ಯ ವ್ಯಾಪಾರ ಉತ್ತೇಜನಾ ಕೇಂದ್ರ ಹಾಗೂ ಕರ್ನಾಟಕ ವೃದ್ಯಕೀಯ ಸಣ್ಣ ಕೈಗಾರಿಕೆಗಳ ಸಂಘದ ಸಹಯೋಗದಲ್ಲಿ ಈ ಕಾರ್ಯಕ್ರಮ ನಡೆಯಲಿದೆ ಎಂದು ಕರ್ನಾಟಕ ವೃದ್ಯಕೀಯ ಸಣ್ಣ ಕೈಗಾರಿಕೆಗಳ ಸಂಘ (ಕಾಶಿಯಾ)ದ ಅಧ್ಯಕ್ಷರಾದ ಬಿ.ಆರ್.ಗಣೇಶ್ ರಾವ್ ತಿಳಿಸಿದ್ದಾರೆ. ಈ ಕಾರ್ಯಕ್ರಮಕ್ಕೆ ಕರ್ನಾಟಕ ಸಣ್ಣ ಕೈಗಾರಿಕೆಗಳ ಸಂಘ ಕಾಶಿಯಾ ವಿಶೇಷವಾದ ವ್ಯವಸ್ಥೆ ಮಾಡುತ್ತಿದೆ. 75 ವರ್ಷಗಳ ಇತಿಹಾಸ ಹೊಂದಿರುವ ಕಾಶಿಯಾ ಸಂಸ್ಥೆಯು ಸಣ್ಣ ಕೈಗಾರಿಕೆಗಳ ಏಳಿಗೆ ಮತ್ತು ಶ್ರೇಯೋಭಿವೃದ್ಧಿಯ ಉದ್ದೇಶದೊಂದಿಗೆ ಕೆಲಸ ಮಾಡುತ್ತಿದೆ. ರಾಜ್ಯ ಮತ್ತು ದೇಶದ ಸಣ್ಣ ಕೈಗಾರಿಕೆಗಳ ಹಿತಾಶಕ್ತಿಯನ್ನು ಪ್ರತಿನಿಧಿಸುವ ರಾಜ್ಯ ವ್ಯಾಪ್ತಿ ಹೊಂದಿರುವ ಏಕೈಕ ಸಂಸ್ಥೆಯಾಗಿದೆ. ರಾಜ್ಯಾದ್ಯಂತ ಇರುವ ಸಣ್ಣ ಕೈಗಾರಿಕೆಗಳು ಎದುರಿಸುತ್ತಿರುವ ಸಮಸ್ಯೆಗಳಿಗೆ ಪರಿಹಾರೋಪಾಯಗಳನ್ನು ಕೈಗೊಳ್ಳುವಲ್ಲಿ ಕಾಸಿಯಾವು ಯಶಸ್ವಿಯಾಗಿ ಸೇವೆ ಸಲ್ಲಿಸುತ್ತಾ ಬಂದಿದೆ. ಹಾಗೂ ಸರ್ಕಾರದ ವಿವಿಧ ಯೋಜನೆಗಳು ಮತ್ತು ನೀತಿ ಕುರಿತಂತೆ ಕೈಗಾರಿಕೋದ್ಯಮಿಗಳಲ್ಲಿ ಅರಿವು ಮೂಡಿಸುವ ನಿಟ್ಟಿನಲ್ಲಿ ಜಿಲ್ಲಾವಾರು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಿದ್ದು, ಲೀನ್ ಯೋಜನೆ ಮತ್ತು ಝಡ್ಇಡಿ ಹಾಗೂ ರಫ್ತು ಕುರಿತು ಒಂದು ದಿನದ ಅರಿವು ಕಾರ್ಯಕ್ರಮಕ್ಕೆ ಇದೀಗ ರಾಯಚೂರ ಜಿಲ್ಲೆಯನ್ನು ಆಯ್ಕೆ ಮಾಡಿದೆ.

ಎಂಎಸ್ಎಂಇಗಳ ಕಾರ್ಯಕ್ಷಮತೆ ಹೆಚ್ಚಿಸುವುದು ಮತ್ತು ವೇಗಗೊಳಿಸುವುದು, ರ್‍ಯಾಂಪ್ ಯೋಜನೆಯಡಿ, 2025–26ನೇ ಸಾಲಿನಲ್ಲಿ ರಫ್ತು, ಲೀನ್ ಯೋಜನೆ ಮತ್ತು ಝಡ್ ಪ್ರಮಾಣೀಕರಣ ಕುರಿತು ಒಂದು ದಿನದ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಈಗಾಗಲೇ ರಾಜ್ಯದ 16 ಜಿಲ್ಲೆಗಳಲ್ಲಿ ಕಾಸಿಯಾ, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ಕರ್ನಾಟಕ ಸರ್ಕಾರ, ಜಿಲ್ಲಾ ಕೈಗಾರಿಕಾ ಕೇಂದ್ರ ಹಾಗೂ ಸ್ಥಳೀಯ ಕೈಗಾರಿಕಾ ಸಂಘಗಳ ಸಹಯೋಗದಲ್ಲಿ ಆಯೋಜಿಸಲಾಗಿದೆ. ಭಾರತ ಸರ್ಕಾರದ ವಾಣಿಜ್ಯ ಇಲಾಖೆಯ ಡಿಸ್ಟ್ರಿಕ್ಟ್ ಆಸ್ ಎಕ್ಸ್ಪೋರ್ಟ್ ಹಬ್ಸ್ ಉಪಕ್ರಮವು ತಳಮಟ್ಟದಲ್ಲಿ ರಫ್ತು ಉತ್ತೇಜನ, ಉತ್ಪಾದನೆ ಮತ್ತು ಉದ್ಯೋಗ ಸೃಷ್ಟಿಯ ಗುರಿಯೊಂದಿಗೆ ಹುಟ್ಟಿಕೊಂಡಿದೆ. ಮೇಕ್ ಇನ್ ಇಂಡಿಯಾದ ದೃಷ್ಟಿಕೋನ ಮತ್ತು ಭಾರತದಲ್ಲಿ ರಫ್ತು ಉತ್ತೇಜನ ಪ್ರಯತ್ನಗಳನ್ನು ಸಮನ್ವಯಗೊಳಿಸುತ್ತಿದೆ.

ರಾಜ್ಯಗಳು ಮತ್ತು ಜಿಲ್ಲೆಗಳನ್ನು ಪಾಲುದಾರನ್ನಾಗಿಸಿ ದೇಶದ ಪ್ರತಿಯೊಂದು ಜಿಲ್ಲೆಯು ಒಂದು ಸಣ್ಣ ಆರ್ಥಿಕ ಸಾಮರ್ಥ್ಯ ಹೊಂದುವಂತೆ ಮಾಡುವ ಉದ್ದೇಶ ಹೊಂದಿದೆ. ಈ ಹಿನ್ನೆಲೆಯಲ್ಲಿ ದೇಶದ ಎಲ್ಲಾ ಜಿಲ್ಲೆಗಳಲ್ಲಿ ಸಮತೋಲಿತ ಪ್ರಾದೇಶಿಕ ಅಭಿವೃದ್ಧಿಯನ್ನು ಬೆಳೆಸುವ ನಿಟ್ಟಿನಲ್ಲಿ ರಫ್ತು ಕುರಿತಂತೆ ಕಾರ್ಯಾಗಾರವನ್ನು ಆಯೋಜಿಸಲಾಗಿದೆ.

ಲೀನ್ ಯೋಜನೆಯು ಭಾರತ ಸರ್ಕಾರದ ಉಪಕ್ರಮವಾಗಿದ್ದು, ನೇರ ಉತ್ಪಾದನಾ ತತ್ವಗಳು ಮತ್ತು ತಂತ್ರಗಳನ್ನು ಅನುಷ್ಠಾನಗೊಳಿಸುವ ಮೂಲಕ ಸೂಕ್ಷ್ಮ ಮತ್ತು ಸಣ್ಣ ಕೈಗಾರಿಕೆಗಳ ಸ್ಪರ್ಧಾತ್ಮಕತೆಯನ್ನು ಹೆಚ್ಚಿಸಲು ವಿನ್ಯಾಸಗೊಳಿಸಲಾಗಿದೆ. ಈ ಯೋಜನೆಯು ಎಂ.ಎಸ್.ಎಂ.ಇಗಳು ಉತ್ಪಾದನಾ ವೆಚ್ಚವನ್ನು ಕಡಿಮೆ ಮಾಡಲು, ಉತ್ಪನ್ನದ ಗುಣಮಟ್ಟವನ್ನು ಸುಧಾರಿಸಲು ಮತ್ತು ನೇರ ಅಭ್ಯಾಸಗಳನ್ನು ಅಳವಡಿಸಿಕೊಳ್ಳುವ ಮೂಲಕ ಒಟ್ಟಾರೆ ದಕ್ಷತೆಯನ್ನು ಹೆಚ್ಚಿಸಲು ಸಹಾಯ ಮಾಡುವ ಗುರಿ ಹೊಂದಿದೆ. ಎಂ.ಎಸ್.ಎಂ.ಇ ಸುಸ್ಥಿರ ಪ್ರಾಮಾಣೀಕರಣವು ಎಂ.ಎಸ್.ಎಂ.ಇ.ಗಳಲ್ಲಿ ಶೂನ್ಯ ದೋಷ ಶೂನ್ಯ ಪರಿಣಾಮ ಅಭ್ಯಾಸಗಳ ಬಗ್ಗೆ ಜಾಗೃತಿ ಮೂಡಿಸುತ್ತದೆ.

ಎಂ.ಎಸ್.ಎಂ.ಇ ಸುಸ್ಥಿರ ಝಡ್ ಪ್ರಮಾಣೀಕರಣದ ಪ್ರಯಾಣದ ಮೂಲಕ ಎಂಎಸ್ಎಂಇಗಳು ವ್ಯರ್ಥವನ್ನು ಗಣನೀಯವಾಗಿ ಕಡಿಮೆ ಮಾಡಬಹುದು, ಉತ್ಪಾದಕತೆಯನ್ನು ಹೆಚ್ಚಿಸಬಹುದು, ಪರಿಸರ ಪ್ರಜ್ಞೆಯನ್ನು ಹೆಚ್ಚಿಸಬಹುದು, ಶಕ್ತಿಯನ್ನು ಉಳಿಸಬಹುದು, ನೈಸರ್ಗಿಕ ಸಂಪನ್ಮೂಲಗಳನ್ನು ಅತ್ಯುತ್ತಮವಾಗಿ ಬಳಸಬಹುದು, ತಮ್ಮ ಮಾರುಕಟ್ಟೆಗಳನ್ನು ವಿಸ್ತರಿಸಬಹುದಾಗಿದೆ.

ಈ ಉದ್ದೇಶಿತ ಕಾರ್ಯಕ್ರಮವು ಸೂಕ್ಷ ಮತ್ತು ಸಣ್ಣ ಕೈಗಾರಿಕೆಗಳ ಉತ್ಪಾದಕತೆ ಮತ್ತು ಸ್ಪರ್ಧಾತ್ಮಕತೆಯನ್ನು ಹೆಚ್ಚಿಸಲು ಸಹಕಾರಿಯಾಗಿದ್ದು ಎಂ.ಎಸ್.ಎಂ.ಇಗಳ ಸಾಮರ್ಥ್ಯ ವೃದ್ಧಿಗಾಗಿ ನಿರ್ಣಾಯಕವಾಗಲಿದೆ. ಹಾಗೂ ದೀರ್ಘಾವಧಿಯ ಆರ್ಥಿಕ ಸ್ಥಿರತೆ ಮತ್ತು ಬೆಳವಣಿಗೆಯನ್ನು ಸಾದಿಸಲು ಅಗತ್ಯವಾದ ಜ್ಞಾನ ಮತ್ತು ಕೌಶಲ್ಯಗಳೊಂದಿಗೆ ತಮ್ಮ ವ್ಯವಹಾರಗಳನ್ನು ಸಶಕ್ತಗೊಳಿಸುವುದಾಗಿದೆ. ಈ ಕಾರ್ಯಕ್ರಮದಲ್ಲಿ ಬೇರೆ ಬೇರೆ ವಿಷಯಕ್ಕೆ ಸಂಬಂಧಿಸಿದಂತೆ ಸಂಪನ್ಮೂಲ ವ್ಯಕ್ತಿಗಳು ವಿಷಯ ಪ್ರಸ್ತುತಪಡಿಸಲಿದ್ದಾರೆ ಹಾಗೂ ಲೀನ್ ಮತ್ತು ಝಡ್ ಪ್ರಮಾಣೀಕರಣಕ್ಕೆ ಸಂಬಂಧಿಸಿದಂತೆ ಸ್ಥಳದಲ್ಲೇ ನೋಂದಾಯಿಸಲು ಅನುವಾಗುವಂತೆ ಸಹಾಯ ವೇದಿಕೆಯನ್ನು ತೆರೆಯಲಾಗುತ್ತದೆ. ಆದ್ದರಿಂದ ಹೆಚ್ಚಿನ ಅರಿವು ಪಡೆಯಲು ಸ್ಥಳೀಯ ಕೈಗಾರಿಕೋದ್ಯಮಿಗಳು ಕಾರ್ಯಕ್ರಮದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗಿಯಾಗಲು ಕಾಶಿಯಾದ ಅಧ್ಯಕ್ಷರಾದ ಬಿ.ಆರ್.ಗಣೇಶ್ ರಾವ್ ಅವರು ಪ್ರಕಟಣೆಯ ಮೂಲಕ ಕೋರಿದ್ದಾರೆ.

# ನೂತನ ಭೈರಾ ಆಂಜಿನೇಯ್ಯ ಸ್ವಾಮಿ ದೇವಸ್ಥಾನ ಲೋಕಾರ್ಪಣೆ ಮಹೋತ್ಸವ

**ಯುವ ಮಾರ್ಗ ಸುದ್ದಿ**

**ಮಾನ್ವಿ,ಜು.25–** ಪಟ್ಟಣದಲ್ಲಿ ನೂತನ ಭೈರಾ ಆಂಜಿನೇಯ್ಯ ಸ್ವಾಮಿ ದೇವಸ್ಥಾನ ಲೋಕಾರ್ಪಣೆ ಹಾಗೂ ಶ್ರೀ ಭೈರಾ ಆಂಜಿನೇಯ್ಯ ಸ್ವಾಮಿ ಮೂರ್ತಿ ಪ್ರಾಣ ಪ್ರತಿಷ್ಠಾಪನೆ ಅಂಗವಾಗಿ ವಿವಿಧ ಧಾರ್ಮಿಕ ಕಾರ್ಯಕ್ರಮಗಳನ್ನು ಭೈರಾ ಆಂಜನೇಯ ಸ್ವಾಮಿ ದೇವಸ್ಥಾನದ ಮಂಡಳಿ ವತಿಯಿಂದ ಹಮ್ಮಿಕೊಳ್ಳಲಾಯಿತು.

ಬೆಳ್ಳಿಗ್ಗೆ ದೇವಸ್ಥಾನದಲ್ಲಿ ಮುಕ್ತಗುಚ್ಚ ಬೃಹನ್ಮಠ ಕಲ್ಮಠ ಮಾನ್ವಿಯ ಶ್ರೀ ವಿರೂಪಾಕ್ಷ ಪಂಡಿತಾರಾಧ್ಯ ಮಹಾಸ್ವಾಮಿಗಳು ಶ್ರೀ ಭೈರಾ ಆಂಜಿನೇಯ್ಯ ಸ್ವಾಮಿ , ಈಶ್ವರ, ಗಣಪತಿ, ನಂದಿ, ನಾಗಪ್ಪ ಸೇರಿದಂತೆ ವಿವಿಧ ದೇವಾತ ಮೂರ್ತಿಗಳ ಪ್ರಾಣ ಪ್ರತಿಷ್ಠಾನೆ ನೆರವೇರಿಸಿದರು. ಚೀಕಲಪರ್ವಿಶ್ರೀ ರುದ್ರಮುನೀಶ್ವರ ಮಠದ ಶ್ರೀ ಸದಾಶಿವ ಮಹಾಸ್ವಾಮಿಗಳು, ಕರೆಗುಡ್ಡ ಶ್ರೀ ಮಹಾಂತೇಶ್ವರ ಮಠದ ಮಹಾಂತಲಿಂಗ ಶಿವಾಚಾರ್ಯ ಮಹಾಸ್ವಾಮಿಗಳು, ಶ್ರೀ ಶಂಕ್ರಯ್ಯ ಸ್ವಾಮಿ ಸುವರ್ಣಗಿರಿ ಮಠ ಹಾಗೂ ದೇವಸ್ಥಾನದ



ಅರ್ಚಕರಾದ ಮಹೇಶ ಕುಮಾರ ಮಾಜಿ ಶಾಸಕ ರಾಜಾ ವೆಂಕಟಪ್ಪ ನಾಯಕ , ಜೆಡಿಎಸ್ ಪಕ್ಷದ ರಾಜ್ಯ ಯುವ ಘಟಕದ ಉಪಾಧ್ಯಕ್ಷರಾದ ರಾಜಾ ರಾಮಚಂದ್ರ ನಾಯಕ, ಹೆಚ್. ಮೌನೇಶ್ ಗೌಡ, ರವಿಕುಮಾರ್ ವಕೀಲರು, ಯಲ್ಲಪ್ಪ ನಾಯಕ, ಶಿವಕುಮಾರ್ ಚಲ್ಮಲ್ ,ಶರಣಪ್ಪ ಗೌಡ ಗವಿಗಟ್ ಸೇರಿದಂತೆ ಸಾವಿರಾರು ಭಕ್ತರು ಭಾಗವಹಿಸಿದರು

ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ

9743497111 9743496111

# ಅತೀ ಹೆಚ್ಚು ದಿನಗಳ ಕಾಲ ಪ್ರಧಾನಿಯಾಗಿ ಇಂದಿರಾ ಗಾಂಧಿ ದಾಖಲೆ ಮುರಿದ ಮೋದಿ



**ನವದೆಹಲಿ,ಜು.25–** ಪ್ರಧಾನಿ ನರೇಂದ್ರ ಮೋದಿ ಅವರು ಇಂದಿರಾ ಗಾಂಧಿ ಅವರನ್ನು ಹಿಂದಿಕ್ಕಿ ದೇಶದಲ್ಲೇ ಅತೀ ಹೆಚ್ಚು ದಿನಗಳ ಕಾಲ ಪ್ರಧಾನಿಯಾದ ಎರಡನೇ ವ್ಯಕ್ತಿ ಎಂಬ ಹೆಗ್ಗಳಿಕೆ ಪಾತ್ರರಾಗಿದ್ದಾರೆ. ಸದ್ಯ ದೇಶದ ಮೊದಲ ಪ್ರಧಾನಿ ಪಂಡಿತ್ ಜವಹಾರ್ ಲಾಲ್ ನೆಹರು ಅವರು ಅತೀ ಹೆಚ್ಚು ಕಾಲ ( 6130 ದಿನ) ಗಳ ಸೇವೆ ಸಲ್ಲಿಸಿದ ದಾಖಲೆ ನಿರ್ಮಿಸಿದ್ದಾರೆ.

ಇದೀಗ ಮೋದಿ ಅವರು, 4,078 ದಿನಗಳನ್ನು ಅಧಿಕಾರದಲ್ಲಿ ಪೂರೈಸಿ ಇಂದಿರಗಾಂಧಿ ಅವರ ದಾಖಲೆಯನ್ನು ಮುರಿದಿದ್ದಾರೆ. ಮಾಜಿ ಪ್ರಧಾನಿ ಇಂದಿರಾಗಾಂಧಿ ಅವರು ಜನವರಿ 24, 1966 ರಿಂದ ಮಾರ್ಚ್ 24, 1977 ರವರೆಗೆ 4,077 ದಿನಗಳ ಕಾಲ ನಿರಂತರ ಅಧಿಕಾರದಲ್ಲಿದ್ದರು. ಭಾರತದ ಮೊದಲ ಪ್ರಧಾನಿ ಜವಾಹರಲಾಲ್ ನೆಹರು ಅವರ ಹೆಸರಿನಲ್ಲಿ ಮುರಿಯದ ದಾಖಲೆ ಇದೆ. ಸತತ ಮೂರು ಲೋಕಸಭಾ ಚುನಾವಣೆಗಳಲ್ಲಿ ತಮ ಪಕ್ಷಗಳನ್ನು ಗೆಲುವಿನತ್ತ ಕೊಂಡೊಯ್ಯುವಲ್ಲಿ ನರೇಂದ್ರ ಮೋದಿ ಅವರು ನೆಹರು ಅವರನ್ನು ಸರಿಗಟ್ಟಿದ್ದಾರೆ.

ರಾಜ್ಯ ಮತ್ತು ಕೇಂದ್ರದಲ್ಲಿ ಚುನಾಯಿತ ಸರ್ಕಾರದ ಮುಖ್ಯಸ್ಥರಾಗಿ, ನರೇಂದ್ರ ಮೋದಿ ಈಗಾಗಲೇ ಅತಿ ಹೆಚ್ಚು ಕಾಲ ಅಧಿಕಾರದಲ್ಲಿದ್ದಾರೆ. ಅವರು 2001 ರಲ್ಲಿ ಗುಜರಾತ್ ಮುಖ್ಯಮಂತ್ರಿಯಾದರು ಮತ್ತು 2014 ರಲ್ಲಿ ಪ್ರಧಾನಿಯಾಗಿ ಅಧಿಕಾರ ವಹಿಸಿಕೊಳ್ಳುವ ಮೊದಲು ಅಧಿಕಾರದಲ್ಲಿದ್ದರು.ಸ್ವಾತಂತ್ರ್ಯದ ನಂತರ ಜನಿಸಿದ ಮೊದಲ ಪ್ರಧಾನಿ ಮೋದಿ, ಕಾಂಗ್ರೆಸ್ ಪಕ್ಷದಿಂದ ಹೊರತಾದ ಅತ್ಯಂತ ದೀರ್ಘಾವಧಿಯ ಪ್ರಧಾನಿಯೂ ಆಗಿದ್ದಾರೆ. ಗುಜರಾತ್‌ನಲ್ಲಿ ಜನಿಸಿದ ನಾಯಕ ಕೇಂದ್ರ ಸರ್ಕಾರದ ಮುಖ್ಯಸ್ಥರಾಗಿ ಎರಡು ಪೂರ್ಣ ಅವಧಿಗಳನ್ನು ಪೂರ್ಣಗೊಳಿಸಿದ ಏಕೈಕ ಕಾಂಗ್ರೆಸ್ಸೇತರ ನಾಯಕ ಎಂದು ಅಧಿಕಾರಿಗಳು ಗಮನಿಸಿದ್ದಾರೆ.

ಭಾರತದ ಮೊದಲ ಪ್ರಧಾನಿ ಜವಾಹರಲಾಲ್ ನೆಹರು ಅವರ ಹೆಸರಿನಲ್ಲಿ ಈ ಅವಿನಾಭಾವ ದಾಖಲೆ ಇದೆ. ಸತತ ಮೂರು ಲೋಕಸಭಾ ಚುನಾವಣೆಗಳಲ್ಲಿ ತಮ ಪಕ್ಷಗಳನ್ನು ಗೆಲುವಿನತ್ತ ಕೊಂಡೊಯ್ಯುವಲ್ಲಿ ನರೇಂದ್ರ ಮೋದಿ ಅವರು ನೆಹರು ಅವರನ್ನು ಸರಿಗಟ್ಟಿದ್ದಾರೆ. 2002, 2007 ಮತ್ತು 2012 ರಲ್ಲಿ ಗುಜರಾತ್ ವಿಧಾನಸಭಾ ಚುನಾವಣೆಗಳಲ್ಲಿ ಮತ್ತು 2014, 2019 ಮತ್ತು 2024 ರಲ್ಲಿ ನಡೆದ ರಾಷ್ಟ್ರೀಯ ಚುನಾವಣೆಗಳಲ್ಲಿ ಪಕ್ಷದ ನಾಯಕರಾಗಿ ಸತತ ಆರು ಚುನಾವಣೆಗಳನ್ನು ಗೆದ್ದ ಭಾರತದ ಎಲ್ಲಾ ಪ್ರಧಾನಿ ಮತ್ತು ಮುಖ್ಯಮಂತ್ರಿಗಳಲ್ಲಿ ಮೋದಿ ಏಕೈಕ ನಾಯಕ ಎಂದು ಸುದ್ದಿ ಸಂಸ್ಥೆ ಪಿಟಿಐ ವರದಿ ಮಾಡಿದೆ.

ಗುಜರಾತ್‌ನ ವಡ್ನಗರದಲ್ಲಿ ಸಾಧಾರಣ ಕುಟುಂಬದಲ್ಲಿ ಜನಿಸಿದ ನರೇಂದ್ರ ಮೋದಿ, ರಾಷ್ಟ್ರೀಯ ಸ್ವಯಂಸೇವಕ ಸಂಘ (ಆರ್‌ಎಸ್‌ಎಸ್) ಮತ್ತು ನಂತರ ಭಾರತೀಯ ಜನತಾ ಪಕ್ಷ (ಬಿಜೆಪಿ) ಯ ಶ್ರೇಣಿಯಲ್ಲಿ ಏರುವ ಮೊದಲು ತಮ ತಂದೆಗೆ ರೈಲ್ವೆ ನಿಲ್ದಾಣದಲ್ಲಿ ಚಹಾ ಮಾರಾಟ ಮಾಡಲು ಸಹಾಯ ಮಾಡಿದರು.

ತಮ ತಳಮಟ್ಟದ ಸಂಪರ್ಕ ಮತ್ತು ಬಲವಾದ ಸಂವಹನ ಶೈಲಿಗೆ ಹೆಸರುವಾಸಿಯಾದ ಮೋದಿ, 2014 ರಲ್ಲಿ ಬಿಜೆಪಿಯನ್ನು ಐತಿಹಾಸಿಕ ರಾಷ್ಟ್ರೀಯ ವಿಜಯದತ್ತ ಕೊಂಡೊಯ್ಯುವ ಮೊದಲು ಒಂದು ದಶಕಕ್ಕೂ ಹೆಚ್ಚು ಕಾಲ ಗುಜರಾತ್‌ನ ಮುಖ್ಯಮಂತ್ರಿಯಾಗಿ ಸೇವೆ ಸಲ್ಲಿಸಿದರು. ಅಂದಿನಿಂದ, ಅವರು ತಮನ್ನು ಪ್ರಮುಖ ಜಾಗತಿಕ ನಾಯಕರಾಗಿ ಸ್ಥಾನಪಡಿಸಿಕೊಂಡಿದ್ದಾರೆ, ಭಾರತವನ್ನು ವಿಶ್ವ ವೇದಿಕೆಯಲ್ಲಿ ಆತವಿಶ್ವಾಸ, ದೃಢನಿಶ್ಚಯದ ಧ್ವನಿಯಾಗಿ ಬಿಂಬಿಸುತ್ತಾರೆ.

ಜವಾಹರಲಾಲ್ ನೆಹರು ಅವರಂತೆ, ಮೋದಿಯವರು ಸತತ ಮೂರು ಲೋಕಸಭಾ ಚುನಾವಣೆಗಳಲ್ಲಿ ತಮ ಪಕ್ಷವನ್ನು ಗೆಲುವಿನತ್ತ ಕೊಂಡೊಯ್ದಿದ್ದಾರೆ. ಗುಜರಾತ್‌ನ ವಡ್ನಗರದಲ್ಲಿ ಸಾಧಾರಣ ಕುಟುಂಬದಲ್ಲಿ ಜನಿಸಿದ ನರೇಂದ್ರ ಮೋದಿ, ತಮ ಬಾಲ್ಯದಲ್ಲಿ ರೈಲ್ವೆ ನಿಲ್ದಾಣದಲ್ಲಿ ತಂದೆಗೆ ಚಹಾ ಮಾರಾಟದಲ್ಲಿ ಸಹಾಯ ಮಾಡಿದವರು. ರಾಷ್ಟ್ರೀಯ ಸ್ವಯಂಸೇವಕ ಸಂಘ (ಆರ್‌ಎಸ್‌ಎಸ್) ಮತ್ತು ಬಿಜೆಪಿಯಲ್ಲಿ ತಮ ರಾಜಕೀಯ ಜೀವನವನ್ನು ಆರಂಭಿಸಿದ ಅವರು, ಕ್ರಮೇಣ ರಾಷ್ಟ್ರೀಯ ಮಟ್ಟದ ನಾಯಕರಾದರು.

2014 ರಲ್ಲಿ ಬಿಜೆಪಿಯನ್ನು ಐತಿಹಾಸಿಕ ಗೆಲುವಿನತ್ತ ಕೊಂಡೊಯ್ದ ಮೋದಿ, ಎರಡು ಪೂರ್ಣ ಅವಧಿಗಳನ್ನು ಕಾಂಗ್ರೆಸ್‌ನೇತರ ಪಕ್ಷದಿಂದ ಪೂರೈಸಿದ ಏಕೈಕ ನಾಯಕರಾಗಿದ್ದಾರೆ. ತಮ ಜನಸಾಮಾನ್ಯರ ಸಂಪರ್ಕ, ಬಲವಾದ ಸಂವಹನ ಶೈಲಿ, ಮತ್ತು ಆಡಳಿತಾತಕ ಕೌಶಲದಿಂದಾಗಿ, ಮೋದಿಯವರು ಭಾರತವನ್ನು ವಿಶ್ವ ವೇದಿಕೆಯಲ್ಲಿ ಆತವಿಶ್ವಾಸದ ಧ್ವನಿಯಾಗಿ ಪ್ರತಿಷ್ಠಾಪಿಸಿದ್ದಾರೆ. ಕ್ರಾಂತಿ ಮಾಡಿದ ಮೋದಿ! ಸತತ ಚುನಾವಣಾ ಗೆಲುವು ಮತ್ತು ದೀರ್ಘಕಾಲೀನ ಅಧಿಕಾರದ ದೃಷ್ಟಿಯಿಂದ, ಮೋದಿಯವರ ಸಾಧನೆ ಭಾರತೀಯ ರಾಜಕಾರಣದಲ್ಲಿ ಅಪೂರ್ವವಾಗಿದೆ.ಕಾಂಗ್ರೆಸ್ ಸೇರಿ ವಿವಿಧ ಪಕ್ಷಗಳ ನಾಯಕರಿಂದ ನಾನಾ ಕಾರಣಗಳಿಗೆ ಸದಾ ಟೀಕೆಗೆ ಗುರಿಯಾದವರು ಪ್ರಧಾನಿ ನರೇಂದ್ರ ಮೋದಿ. ಎರಡೂ ಅವಧಿಯಲ್ಲಿ ಬಿಜೆಪಿಗೆ ಬಹುಮತ ಇತ್ತು. ಎಲ್ಲ ಟೀಕೆಗಳನ್ನು ಸಮರ್ಥವಾಗಿ ಎದುರಿಸಿದರು.

ಈ ಸಲ ಹಾದಿ ಹೂಹಾಸಿನಷ್ಟು ಸುಲಭದ್ದಲ್ಲ. ಮಿತ್ರಪಕ್ಷಗಳ ನಾಯಕರ ಸಲಹೆ, ಬೇಡಿಕೆಗಳಿಗೂ ಸ್ಪಂದಿಸಬೇಕು. ತಪ್ಪಿದರೆ ಅವರಿಂದಲೂ ಟೀಕೆ ಎದುರಿಸಬೇಕಾದ ಅನಿವಾರ್ಯತೆ ಇದೆ. ಸ್ಥಿರ ಸರ್ಕಾರ ನೀಡಬೇಕಾದರೆ ಸಮತೋಲನದ ನಡಿಗೆ ಈ ಬಾರಿ ಅನಿವಾರ್ಯ. ಅದು ನರೇಂದ್ರ ಮೋದ ಅವರ ಸಾಮರ್ಥ್ಯಕ್ಕೆ ಒಡ್ಡಿರುವ ಸವಾಲು.

# ಜ್ಞಾನಕ್ಕೆ ಸಮಾನವಾದುದ್ದು ಮತ್ತೊಂದಿಲ್ಲ :ಎನ್.ಎಂ.ಬಿರಾದಾರ

**ಯುವ ಮಾರ್ಗ ಸುದ್ದಿ**

**ಅಳಂದ,ಜು.25–**ಜಗತ್ತಿನಲ್ಲಿ ಜ್ಞಾನಕ್ಕಿರುವಷ್ಟು ಬೆಲೆ ಬೇರೆ ಯಾವ ವಸ್ತುವಿಗೂ ಇಲ್ಲ ಎಂದು ವಿಜಯಪುರದ ಚಾಣಕ್ಯ ಕರಿಯರ್ ಅಕಾಡೆಮಿ ನಿರ್ದೇಶಕ ಎನ್ ಎಂ ಬಿರಾದಾರ ಅಭಿಪ್ರಾಯಪಟ್ಟರು.

ಶುಕ್ರವಾರ ಆಳಂದ ಪಟ್ಟಣದ ಪೂಜ್ಯ ಶ್ರೀರಾಜಶೇಖರ ಮಹಾಸ್ವಾಮೀಜಿ ಶಿಕ್ಷಣ ಮಹಾವಿದ್ಯಾಲಯದಲ್ಲಿ ಹಮ್ಮಿಕೊಂಡಿದ್ದ ಪ್ರಥಮ ವರ್ಷದ ವಿದ್ಯಾರ್ಥಿಗಳ ಸ್ವಾಗತ ಹಾಗೂ ದ್ವೀತಿಯ ವರ್ಷದ ವಿದ್ಯಾರ್ಥಿಗಳ ಬಿಳ್ಕೋಡುಗೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಸ್ಪರ್ಧಾತ್ಮಕ ಜಗತ್ತಿನಲ್ಲಿ ಸ್ಪರ್ಧೆ ತೀವ್ರವಾಗಿದ್ದರೂ ಅವಕಾಶಗಳು ಹೇರಳವಾಗಿವೆ ಈ ನಿಟ್ಟಿನಲ್ಲಿ ವಿದ್ಯಾರ್ಥಿಗಳು ಸೂಕ್ತ ಮಾರ್ಗದರ್ಶನ, ತಯಾರಿ ಮಾಡಿ ಕೊಂಡು ಪರೀಕ್ಷೆಗಳನ್ನು ಎದುರಿಸಲು ಮುಂದೆ ಬರಬೇಕು ಎಂದು ಸಲಹೆ ನೀಡಿದರು. ಶಿಕ್ಷಕ ವೃತ್ತಿಯಲ್ಲಿ ಆತ್ಮಸಂತೃಪ್ತಿ ಕಾಣಬಹುದು ಅಲ್ಲದೇ ಸಮಾಜಕ್ಕೆ ಉನ್ನತ ಮಟ್ಟದಲ್ಲಿ ಕಾಣಿಕೆ ನೀಡುವ ಮಹತ್ತರ ಅವಕಾಶ ಒದಗಿ ಬರುತ್ತದೆ ಹೀಗಾಗಿ ವಿದ್ಯಾರ್ಥಿಗಳು ಶಿಕ್ಷಕ ವೃತ್ತಿಯನ್ನು ಅಪಾರವಾಗಿ ಪ್ರೀತಿಸಬೇಕು ಜೊತೆಗೆ ಗೌರವಿಸಬೇಕು ಎಂದು ಕರೆ ನೀಡಿದರು.



ಡಾ. ಮಲ್ಲೇಶಪ್ಪ ಕುಂಬಾರ ಮಾತನಾಡಿ, ಜಗತ್ತು ಅವಕಾಶಗಳ ಆಗರ ಇಲ್ಲಿ ಪರಿಶ್ರಮ ಪಟ್ಟವರಿಗಷ್ಟೇ ಫಲ ಸಿಗುತ್ತದೆ ಆದರಿಂದ ಪ್ರತಿಕ್ಷಣವನ್ನು ವ್ಯವಸ್ಥಿತವಾಗಿ ಬಳಸಿಕೊಳ್ಳುವ ಕೌಶಲ್ಯ ಬೆಳೆಸಿಕೊಳ್ಳಬೇಕು ಎಂದು ಸಲಹೆ ನೀಡಿದರು.


ಸಂಸ್ಥೆಯ ಅಧ್ಯಕ್ಷ ಸುಭಾಷ ಗುತ್ತೇದಾರ ಮಾತನಾಡಿ, ಹಿಂದುಳಿದ ಭಾಗದ ಹಣೆಪಟ್ಟಿಯನ್ನು ಹೊಡೆದೊಡಿಸುವ ನಿಟ್ಟಿನಲ್ಲಿ ಆಳಂದ ತಾಲೂಕಿನಲ್ಲಿ ಶಿಕ್ಷಣ ಸಂಸ್ಥೆ ಆರಂಭಿಸಿ ಶಿಕ್ಷಣ ನೀಡುವ ಕೆಲಸ ಮಾಡಲಾಗುತ್ತಿದೆ. ಸಂಸ್ಥೆಯಲ್ಲಿ ಕಲಿತ ಸಾವಿರಾರು ವಿದ್ಯಾರ್ಥಿಗಳು ಸರ್ಕಾರಿ ನೌಕರರಾಗಿರುವುದು ಹೆಮ್ಮೆಯ ವಿಷಯ ಎಂದರು.

ಸಾನಿಧ್ಯ ವಹಿಸಿ ಮಾತನಾಡಿದ ನಂದಗಾಂವನ ರಾಜಶೇಖರ ಮಹಾಸ್ವಾಮೀಜಿ, ಶಿಕ್ಷಕ ವೃತ್ತಿಗೆ ಸಮಾಜದಲ್ಲಿ ಅಪಾರ ಬೇಡಿಕೆಯಿದೆ ಪ್ರಶಿಕ್ಷಣಾರ್ಥಿಗಳು ಕೌಶಲ್ಯ, ಚಟುವಟಿಕೆ ಆಧಾರಿತ ಕಲಿಕಾ ವಿಧಾನಗಳನ್ನು ತರಬೇತಿ ಅವಧಿಯಲ್ಲಿ ಪರಿಪೂರ್ಣವಾಗಿ ಕಲಿಯಬೇಕು ಎಂದು ಆಶೀರ್ವಚನ ನೀಡಿದರು.

ವಿಕೆಜಿ ಪದವಿ ಕಾಲೇಜಿನ ಪ್ರಾಚಾರ್ಯ ಕಲ್ಯಾಣಿ ಸಾವಳಗಿ, ಎಂಎ ಆರ್‌ಜಿ ಪದವಿ ಪೂರ್ವ ಕಾಲೇಜಿನ ಪ್ರಾಚಾರ್ಯ ಡಾ. ಅಪ್ಪಾಸಾಬ ಬಿರಾದಾರ, ಎಸ್‌ಆರ್‌ಜಿ ಆಂಗ್ಲ ಮಾಧ್ಯಮ ಶಾಲೆಯ ಪ್ರಾಚಾರ್ಯೆ ಜ್ಯೋತಿ ವಿಶಾಖ ವೇದಿಕೆಯ ಮೇಲಿದ್ದರು.

ಪ್ರಶಿಕ್ಷಣಾರ್ಥಿ ಅರುಂಧತಿ ಪ್ರಾರ್ಥನೆ ಗೀತೆ ನಡೆಸಿಕೊಟ್ಟರು. ಪ್ರಶಿಕ್ಷಣಾರ್ಥಿಗಳಾದ ವಿದ್ಯಾ, ರೂಪಾ ನಿರೂಪಿಸಿದರು.ಪ್ರಾಚಾಯರ್ ಅಶೋಕರೆಡ್ಡಿ ಸ್ವಾಗತಿಸಿ,ವಂದಿಸಿದರು.

# ಈ ಬಾರಿಯೂ ಅಂಬಾರಿ ಹೊರಲಿರುವ ಅಭಿಮನ್ಯು



**ಮೈಸೂರು,ಜು.25–** ವಿಶ್ವವಿಖ್ಯಾತ ನಾಡಹಬ್ಬ ಮೈಸೂರು ದಸರಾ ಮಹೋತ್ಸವದ ಜಂಬೂ ಸವಾರಿಯಲ್ಲಿ ಪಾಲ್ಗೊಳ್ಳಲಿರುವ ಗಜಪಡೆಯು ಮೊದಲ ಪಟ್ಟಿ ಬಿಡುಗಡೆಯಾಗಿದ್ದು, ಈ ಬಾರಿಯೂ ಕ್ಯಾಪ್ಟನ್ ಅಭಿಮನ್ಯು ಅಂಬಾರಿ ಹೊರಲಿದ್ದಾನೆ.

2025ನೇ ಸಾಲಿನ ದಸರಾ ಮಹೋತ್ಸವದಲ್ಲಿ ಪಾಲ್ಗೊಳ್ಳುವ ಒಟ್ಟು 14 ಆನೆಗಳ ಪೈಕಿ 9 ಅನೆಗಳ ಪಟ್ಟಿಯನ್ನು ಅರಣ್ಯ ಸಚಿವ ಈಶ್ವರ್ ಖಂಡ್ರೆ ಬಿಡಗಡೆ ಮಾಡಿದರು.ಸತತ ಐದನೇ ಬಾರಿಯೂ ಕ್ಯಾಪ್ಟನ್ ಅಭಿಮನ್ಯು ನಾಡದೇವಿ ಚಾಮುಂಡೇಶ್ವರಿ ತಾಯಿ ವಿಗ್ರಹವಿರುವ ಸುಮಾರು 750 ಕೆಜಿ ತೂಕದ ಅಂಬಾರಿಯನ್ನು ಹೊತ್ತು ಹೆಜ್ಜೆ ಹಾಕಲಿದ್ದಾನೆ.

ಆಗಸ್ಟ್ 4 ರಂದು ಹುಣಸೂರು ಬಳಿಯ ವೀರನಹೊಸಳ್ಳಿಯಿಂದ ಮೊದಲ ತಂಡದ ಗಜಪಯಣಕ್ಕೆ ಚಾಲನೆ ನೀಡಲಾಗುವುದು ಎಂದರು. ಮೊದಲ ಗಜಪಡೆಯ ಪಟ್ಟಿಯಲ್ಲಿ ಮತ್ತಿಗೋಡು ಆನೆ ಶಿಬಿರದ ಭೀಮ(24), ಕಂಜನ್ (24), ಧನಂಜಯ್(44), ಪ್ರಶಾಂತ(53), ಬಳ್ಳೆ ಆನೆ ಶಿಬಿರದಿಂದ ಮಹೇಂದ್ರ (42), ಲಕ್ಷ್ಮಿ (53), ದೊಡ್ಡಹರವೆ ಶಿಬಿರದ ಏಕಲವ್ಯ(40), ದುಬಾರೆ ಶಿಬಿರದ ಕಾವೇರಿ(45) ಆನೆಗಳು ಆ.4 ರಂದು ಅರಮನೆ ನಗರಿಯತ್ತ ತೆರಳಲಿವೆ.

# ಉಪನ್ಯಾಸಕರಿಗೆ ವೇತನಸಹಿತ ಬಿ.ಇಡಿ ವ್ಯಾಸಂಗಕ್ಕೆ ಅನುಮತಿ:ನಮೋಶಿ ಹರ್ಷ



**ಕಲಬುರಗಿ,ಜು.25–** ರಾಜ್ಯದ ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ 4–2–2008ರ ನಂತರ ನೇಮಕಗೊಂಡು ಅನುದಾನಕ್ಕೆ ಒಳಪಟ್ಟ 364 ಬಿ.ಇಡಿ ಪದವಿ ಹೊಂದದ ಉಪನ್ಯಾಸಕರು ವೇತನ ಸಹಿತ ವ್ಯಾಸಂಗ ಕೈಗೊಳ್ಳಲು ಶಾಲಾ ಶಿಕ್ಷಣ ಇಲಾಖೆ ಅನುಮತಿ ನೀಡಿ ಆದೇಶ ಹೊರಡಿಸಿದೆ ಎಂದು ವಿಧಾನ ಪರಿಷತ್ ಸದಸ್ಯ ಶಶೀಲ್ ನಮೋಶಿ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿ, ಹರ್ಷ ವ್ಯಕ್ತಪಡಿಸಿದ್ದಾರೆ

ಈ ಆದೇಶದಿಂದ ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ ಬಿ.ಇಡಿ ರಹಿತವಾಗಿ ಕಾರ್ಯನಿರ್ವಹಿಸುತ್ತಿರುವ 364 ಉಪನ್ಯಾಸಕರು ನಿಟ್ಟುಸಿರು ಬಿಡುವಂತಾಗಿದೆ ಎಂದು ಅಭಿಪ್ರಾಯಪಟ್ಟರು ಉಪನ್ಯಾಸಕರಾಗಿ ಸುಮಾರು 15ವರ್ಷ ಸೇವೆ ಸಲ್ಲಿಸಿ ತದನಂತರ ವೇತನ ರಹಿತವಾಗಿ 2 ವರ್ಷ ಬಿ.ಇಡಿ ಪದವಿ ವ್ಯಾಸಂಗಕ್ಕೆ ಹೋಗುವುದೆಂದರೆ ಅವರಇಡೀ ಕುಟುಂಬವನ್ನು ಅರ್ಥಿಕ ದುಸ್ಥಿತಿಗೆ ತಳ್ಳಿದಂತಾಗುತ್ತಿತ್ತು ಮತ್ತು ಇದು ಅಸಾಧ್ಯವಾದ ಮಾತಾಗಿತ್ತು. ಈ ಎಲ್ಲಸಮಸ್ಯೆಗಳನ್ನು ಪದವೀಧರ ಮತಕ್ಷೇತ್ರ ಮತ್ತು ಶಿಕ್ಷಕರ ಮತಕ್ಷೇತ್ರಗಳಿಂದ ಆಯ್ಕೆಯಾದ ಎಲ್ಲಾ ವಿಧಾನ ಪರಿಷತ್‌ಸದಸ್ಯರು ಹಾಗೂ ಉಪನ್ಯಾಸಕರ ಸಂಘಟನೆಯವರು ಮುಖ್ಯಮಂತ್ರಿಗಳ ಹಾಗೂ ಪ್ರಾಥಮಿಕ ಹಾಗೂ ಪ್ರೌಢ ಶಾಲಾಶಿಕ್ಷಣ ಇಲಾಖೆ ಸಚಿವರ ಗಮನಕ್ಕೆ ತಂದು ಒತ್ತಡ ಹೇರಿದ ಪರಿಣಾಮವಾಗಿ ಸರ್ಕಾರ ಈ ಒಳ್ಳೆಯ ನಿರ್ಣಯ ಕೈಗೊಂಡಿದೆ ಎಂದು ಹರ್ಷ ವ್ಯಕ್ತಪಡಿಸಿದರು

ಈ ಹಿಂದೆ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಬಿ.ಇಡಿ. ಪದವಿ ಹೊಂದದೆ ನೇಮಕಗೊಂಡ ಉಪನ್ಯಾಸಕರಿಗೆ 2 ಬ್ಯಾಚುಗಳಲ್ಲಿ ವೇತನ ಸಹಿತ ಬಿ. ಇಡಿ. ವ್ಯಾಸಂಗ ಕೈಗೊಳ್ಳಲು ಅನುಮತಿ ನೀಡಿತ್ತು. ಆದಾದ ನಂತರ ಜೆ.ಓ.ಸಿ.ಕೋರ್ಸ್‌ಗಳಲ್ಲಿ ಕಾರ್ಯನಿರ್ವಹಿಸುತ್ತಿದ್ದ ಬಿ.ಇಡಿ ರಹಿತ ಉಪನ್ಯಾಸಕರಿಗೂ ಕೂಡ ವೇತನ ಸಹಿತ ವ್ಯಾಸಂಗ ಮಾಡಿಕೊಂಡು ಬರಲು ಅನುಮತಿ ನೀಡಿದ ಮಾದರಿಯಲ್ಲಿಯೇ ಸರ್ಕಾರ ಈಗ ಅದೇ ಮಾದರಿಯಲ್ಲಿ ಆದೇಶ ಹೊರಡಿಸಿರುವುದು ಉಪನ್ಯಾಸಕರಿಗೆ ಸಂತಸ ತಂದಿದೆ ಎಂದಿದ್ದಾರೆ

# ಕುನ್ಹಾ ವರದಿಯಲ್ಲಿ ಗೋವಿಂದರಾಜು ಹೆಸರಿಲ್ಲ



**ಬೆಂಗಳೂರು,ಜು.25–**ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣ ಬಳಿ ನಡೆದ ಕಾಲ್ತುಳಿತ ಪ್ರಕರಣಕ್ಕೆ ಸಂಬಂಧಿಸಿದಂತೆ ನಿವೃತ್ತ ನ್ಯಾಯಮೂರ್ತಿ ಜಾನ್‌ಮೈಕಲ್ ಡಿ. ಕುನ್ಹಾ ಅವರ ವರದಿಯಲ್ಲಿ ವಿಧಾನ ಪರಿಷತ್ ಸದಸ್ಯ ಗೋವಿಂದರಾಜು ಅವರ ಹೆಸರು ಉಲ್ಲೇಖವಿಲ್ಲ.

ಆರ್‌ಸಿಬಿ, ಡಿಎನ್‌ಎ, ಕೆಎಸ್‌ಸಿಎ ಹಾಗೂ ಪೊಲೀಸ್ ಅಧಿಕಾರಿಗಳ ಬಗ್ಗೆ ಉಲ್ಲೇಖವಿದೆ ಎಂದು ಗೃಹ ಸಚಿವ ಡಾ. ಜಿ. ಪರಮೇಶ್ವರ್ ಸ್ಪಷ್ಟಪಡಿಸಿದರು.

ಬೆಂಗಳೂರಿನಲ್ಲಿ ಸುದ್ದಿಗಾರ ರೊಂದೊಗೆ ಮಾತನಾಡಿದ ಅವರು, ನ್ಯಾಯ ಮೂರ್ತಿ ಕುನ್ಹಾ ಅವರ ವರದಿಯನ್ನು ಒಪ್ಪಿಕೊಂಡಿದೆ. ವರದಿಯ ಶಿಫಾರಸ್ಸನ್ನು ಅನುಷ್ಠಾನ ಮಾಡುತ್ತೇವೆ. ಆರ್.ಸಿಬಿ, ಡಿಎನ್‌ಎ ಹಾಗೂ ಕೆಎಸ್‌ಸಿಎ ವಿರುದ್ಧ ಪ್ರಕರಣಗಳನ್ನು ದಾಖಲಿಸಿ ಕ್ರಮಕೈಗೊಳ್ಳುತ್ತೇವೆ ಎಂದು ಹೇಳಿದರು.

ಕಾಲ್ತುಳಿತ ಪ್ರಕರಣಕ್ಕೆ ಸಂಬಂಧಿಸಿದಂತೆ ಪೊಲೀಸ್ ಅಧಿಕಾರಿಗಳನ್ನು ಈಗಾಗಲೇ ಅಮಾನತು ಮಾಡಲಾಗಿದೆ. ಇಲಾಖಾ ವಿಚಾರಣೆಗೂ ನಿರ್ಧಾರ ಕೈಗೊಂಡಿದ್ದೇವೆ ಎಂದು ಹೇಳಿದರು.

ರೌಡಿ ಶೀಟರ್ ಬಿಕ್ಲುಶಿವ ಹತ್ಯೆ ಪ್ರಕರಣದ ತನಿಖೆಯನ್ನು ಸಿಐಡಿಗೆ ನೀಡಿದ್ದೇವೆ. ಈ ಬಗ್ಗೆ ತನಿಖೆಗೆ ಎಸ್‌ಐಟಿ ರಚಿಸಿಲ್ಲ ಎಂದು ಹೇಳಿದ ಅವರು, ಈ ಪ್ರಕರಣದ ಬಗ್ಗೆ ಸ್ಥಳೀಯ ಪೊಲೀಸರು ತನಿಖೆ ನಡೆಸಿದ್ದರು. ಈ ನಡುವೆ ಈ ಪ್ರಕರಣವನ್ನು ಸಿಐಡಿ ತನಿಖೆಗೆ ವಹಿಸಲು ನಿರ್ಧರಿಸಲಾಗಿದೆ ಎಂದು ಹೇಳಿದರು.

ಮಹದಾಯಿ ಯೋಜನೆಗೆ ಸಂಬಂಧಿಸಿದಂತೆ ಕೇಂದ್ರ ಸರ್ಕಾರ ಮಧ್ಯಸ್ಥಿಕೆ ವಹಿಸಿ ಎಲ್ಲವನ್ನು ಪರಿಹರಿಸಬೇಕು ಎಂದು ಅವರು ಹೇಳಿ ಕೇಂದ್ರ ಸರ್ಕಾರ ಆದಷ್ಟು ಬೇಗ ಮಧ್ಯಸ್ಥಿಕೆ ವಹಿಸಿ ಇದನ್ನು ಬಗೆಹರಿಸುವಂತೆಯೂ ಒತ್ತಾಯಿಸುತ್ತೇನೆ ಎಂದು ಹೇಳಿದರು.

ಮಹದಾಯಿ ಯೋಜನೆಗೆ 2022ರಲ್ಲಿ ಕೇಂದ್ರ ಸರ್ಕಾರ ಅನುಮತಿ ನೀಡಿತ್ತು. ನಂತರ ಗೋವಾ ಮತ್ತು ಕರ್ನಾಟಕದ ನಡುವೆ ಸಂಘರ್ಷ ಶುರುವಾಗಿದೆ. ಕುಡಿಯುವ ನೀರಿನ ಯೋಜನೆಗೆ ಯಾವುದೇ ರೀತಿಯ ನಿರ್ಬಂಧವಿರಬಾರದು ಎಂದು ಹಲವು ಬಾರಿ ಹೇಳಿದೆ. ಇದನ್ನು ಗಮನದಲ್ಲಿಟ್ಟುಕೊಂಡು ಮಹದಾಯಿ ವಿವಾದ ಯೋಜನೆ ವಿವಾದ ಬಗೆರಹರಿಸಲು ಕೇಂದ್ರ ಮುಂದಾಗಬೇಕು ಎಂದು ಹೇಳಿದರು.

ಮಹದಾಯಿ, ಮೇಕೆದಾಟು ಯೋಜನೆಗೆ ಸಂಬಂಧಿಸಿದಂತೆ ಸರ್ವ ಪಕ್ಷಗಳ ಸಭೆ ಕರೆಯುವ ಬಗ್ಗೆ ಮುಖ್ಯಮಂತ್ರಿ ಉಪಮುಖ್ಯಮಂತ್ರಿಗಳು ತೀರ್ಮಾನ ಮಾಡುತ್ತಾರೆ ಎಂದು ಹೇಳಿದರು. ಲೋಕಸಭಾ ಚುನಾವಣೆಯ ಸಂದರ್ಭದಲ್ಲಿ ಅಕ್ರಮವಾಗಿದೆ ಎಂದು ರಾಹುಲ್ ಮಾಡಿರುವ ಆರೋಪವನ್ನು ಈಗಾಗಲೇ ಪಕ್ಷದ ಅಧ್ಯಕ್ಷರು ಸಮರ್ಥಿಸಿಕೊಂಡಿದ್ದಾರೆ. ಕರ್ನಾಟಕದಲ್ಲೂ ಈ ಅಕ್ರಮ ನಡೆದಿದೆ. ಅದನ್ನು ಸಾಬೀತುಪಡಿಸುವುದಾಗಿ ರಾಹುಲ್ ಅವರು ಹೇಳಿದ್ದಾರೆ ಎಂದು ಪ್ರಶ್ನೆಯೊಂದಕ್ಕೆ ಉತ್ತರಿಸುತ್ತ ಹೇಳಿದರು. ವಿರೋಧ ಪಕ್ಷವಾದ ಬಿಜೆಪಿ ಸಕರಾತ್ಮಕ ಟೀಕೆಗಳನ್ನು ಮಾಡಬೇಕು. ಟೀಕೆ ಮಾಡಲೆಂದೇ ಟೀಕೆ ಮಾಡುವುದು ಸರಿಯಲ್ಲ ಎಂದು ಅವರು ತಿಳಿಸಿದರು.

# ಆಶಾ ಕಾರ್ಯಕರ್ತೆಯ 23 ಗ್ರಾಂ.ಚಿನ್ನದ ಸರ ಕಳವು

**ಕಲಬುರಗಿ,ಜು.25–**ಆಶಾ ಕಾರ್ಯಕರ್ತೆಯೊಬ್ಬರ 1,35,607 ರೂ.ಮೌಲ್ಯದ 23 ಗ್ರಾಂ.ಚಿನ್ನದ ಸರ ಕಳವಾಗಿರುವ ಘಟನೆ ನಗರದಲ್ಲಿ ನಡೆದಿದೆ.

ಆಶಾ ಕಾರ್ಯಕರ್ತೆಯರ ಸಂಘಟನೆಯ ದಾವಣಗೇರೆ ಜಿಲ್ಲಾ ಅಧ್ಯಕ್ಷರಾದ ಲಲೀತಮ್ಮಾ (49) ಎಂಬುವವರ ಚಿನ್ನದ ಸರ ಕಳವಾಗಿದ್ದು, ಈ ಸಂಬಂಧ ಆಶಾ ಕಾರ್ಯಕರ್ತೆಯರ ಸಂಘಟನೆಯ ಕಲಬುರಗಿ ಜಿಲ್ಲಾ ಕಾರ್ಯದರ್ಶಿ ಶರಣಬಸಪ್ಪ ಶರ್ಮಾ ಅವರು ಬ್ರಹ್ಮಪುರ ಪೊಲೀಸ್ ಠಾಣೆಯಲ್ಲಿ ದೂರು ಸಲ್ಲಿಸಿದ್ದಾರೆ.

ಇತ್ತೀಚೆಗೆ ನಗರದಲ್ಲಿ ಪ್ರಥಮ ರಾಜ್ಯ ಮಟ್ಟದ ಆಶಾ ಸಮ್ಮೇಳನ ಹಮ್ಮಿಕೊಳ್ಳಲಾಗಿತ್ತು. ಲಲೀತಮ್ಮಾ ಅವರು ಸಹ ಸಮ್ಮೇಳನಕ್ಕೆ ಆಗಮಿಸಿದ್ದರು. ಆಶಾ ಕಾರ್ಯಕರ್ತೆಯರು ಉಳಿದುಕೊಳ್ಳಲು ನಗರದ ವೀರಶೈವ ಕಲ್ಯಾಣ ಮಂಟಪದಲ್ಲಿ ವ್ಯವಸ್ಥೆ ಮಾಡಲಾಗಿತ್ತು. ಈ ವೇಳೆ ಲಲೀತಮ್ಮಾ ಅವರ ಬಳಿ ಇದ್ದ 23 ಗ್ರಾಂ.ಚಿನ್ನದ ಸರ ಕಳವಾಗಿದೆ ಎಂದು ಅವರು ದೂರಿನಲ್ಲಿ ತಿಳಿಸಿದ್ದಾರೆ.

ಬ್ರಹ್ಮಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ತನಿಖೆ ನಡೆದಿದೆ.

# 4 ವರ್ಷದ ಬಾಲಕಿ ಮೇಲೆ ಅತ್ಯಾಚಾರ

**ಬೀದರ್,ಜು.25–**ಖಾಸಗಿ ಶಾಲೆಯೊಂದರ ನರ್ಸರಿಯ, ನಾಲ್ಕು ವರ್ಷದ ಬಾಲಕಿ ಮೇಲೆ ಅತ್ಯಾಚಾರ ನಡೆದಿದೆ. ಇಲ್ಲಿನ ಮಹಿಳಾ ಪೊಲೀಸ್ ಠಾಣೆಯಲ್ಲಿ ಗುರುವಾರ ಪ್ರಕರಣ ದಾಖಲಾಗಿದೆ.ಬಾಲಕಿ ಬುಧವಾರ (ಜು.23) ಶಾಲೆಗೆ ಹೋಗಿ ಮನೆಗೆ ಮರಳಿದ್ದಳು. ತಾಯಿ ಮಗಳ ಶಾಲಾ ಉಡುಪು ತೆಗೆಯುವಾಗ ರಕ್ತಸ್ರಾವವಾಗಿರುವುದು ಗೊತ್ತಾಗಿದೆ.ಗುಪ್ತಾಂಗದಿಂದ ರಕ್ತಸ್ರಾವ ಆಗುತ್ತಿದ್ದದನ್ನು ಗಮನಿಸಿದ್ದು, ಕೂಡಲೇ ಚಿಕಿತ್ಸೆ ಕೊಡಿಸಿದ್ದಾರೆ. ಬಳಿಕ ಠಾಣೆಗೆ ದೂರು ನೀಡಿದ್ದು, ಅಪರಿಚಿತರ ವಿರುದ್ಧ ಪ್ರಕರಣ ದಾಖಲಾಗಿದೆ' ಎಂದು ಪೊಲೀಸರು ತಿಳಿಸಿದ್ದಾರೆ.

ಯುವ ಮಾರ್ಗ

ಶನಿವಾರ : 26–07–2025

## ಜಿಲ್ಲಾ ಮಟ್ಟದ ವಾರ್ಷಿಕ ಪ್ರಶಸ್ತಿಗೆ ಈಶಾನ್ಯ ಟೈಮ್ಸ್ ವರದಿಗಾರ ಮಲ್ಲಪ್ಪ ಆಯ್ಕೆ



**ಯುವ ಮಾರ್ಗ ಸುದ್ದಿ**

**ಸಿರವಾರ, ಜು.25–**ಪತ್ರಿಕಾ ದಿನಾಚರಣೆಯ ಅಂಗವಾಗಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದಿಂದ ಕೊಡಮಾಡುವ ಜಿಲ್ಲಾ ಮಟ್ಟದ ವಾರ್ಷಿಕ ಪ್ರಶಸ್ತಿಗೆ ಸಿರವಾರ ತಾಲೂಕು ಈಶಾನ್ಯ ಟೈಮ್ಸ್ ಪತ್ರಿಕೆಯ ವರದಿಗಾರ ಬಿ.ಮಲ್ಲಪ್ಪ ಅವರು ಆಯ್ಕೆಯಾಗಿದ್ದಾರೆ.

ಜು. 27 ರಂದು ಲಿಂಗಸಗೂರಿನಲ್ಲಿ ಆಯೋಜಿಸಲಾಗಿರುವ ಜಿಲ್ಲಾ ಮಟ್ಟದ ಪತ್ರಿಕಾ ದಿನಾಚರಣೆ ಹಾಗೂ ಪ್ರಶಸ್ತಿ ಪ್ರಧಾನ ಸಮಾರಂಭದಲ್ಲಿ ಜಿಲ್ಲಾ ಉತ್ತಮ ಪತ್ರಕರ್ತ ವಾರ್ಷಿಕ ಪ್ರಶಸ್ತಿ ನೀಡಿ ಗೌರವಿಸಲಾಗುತ್ತದೆ.ಕಾರ್ಯನಿರತ ಪತ್ರಕರ್ತರ ಸಂಘ ರಾಯಚೂರು ಹಾಗೂ ತಾಲೂಕು ಘಟಕ ಲಿಂಗಸಗೂರು ಇವರ ಸಹಯೋಗದಲ್ಲಿ ನಡೆಯುವ ಜಿಲ್ಲಾ ಪತ್ರಿಕಾ ದಿನಾಚರಣೆ ಮತ್ತು ಪ್ರಶಸ್ತಿ ಪ್ರಧಾನ ಸಮಾರಂಭವನ್ನು ವೈದ್ಯಕೀಯ ಹಾಗೂ ಉನ್ನತ ಶಿಕ್ಷಣ, ಮತ್ತು ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಶರಣ ಪ್ರಕಾಶ ಪಾಟೀಲ್ ಉದ್ಘಾಟಿಸಲಿದ್ದು, ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್. ಎಸ್. ಬೋಸರಾಜು ಅವರು ಪ್ರಶಸ್ತಿ ಪ್ರಧಾನ ಮಾಡಲಿದ್ದಾರೆ.

ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷರಾದ ಶಿವಾನಂದ ತಗಡೂರು, ಜಿಲ್ಲಾಧ್ಯಕ್ಷರಾದ ಆರ್. ಗುರುನಾಥ ಸೇರಿದಂತೆ ಸಂಸದರು, ಶಾಸಕರು, ಜಿಲ್ಲೆಯ ಎಲ್ಲಾ ಪತ್ರಕರ್ತರು ಭಾಗವಹಿಸಲಿದ್ದಾರೆ.

## ಎಣ್ಣೆ ಕಾಳು ಕೊಯ್ಲೋತ್ತರ ಘಟಕಕ್ಕೆ ನೆರವು ವಿತರಿಸಲು ಅರ್ಜಿ ಆಹ್ವಾನ

**ರಾಯಚೂರು,ಜು.25–**ಇಲ್ಲಿನ ಜಂಟಿ ಕೃಷಿ ನಿರ್ದೇಶಕರ ಕಾರ್ಯಾಲಯದಿಂದ 2025–26ನೇ ಸಾಲಿನ ರಾಷ್ಟ್ರೀಯ ಖಾದ್ಯ ತೈಲ ಅಭಿಯಾನದ ಎಣ್ಣೆ ಕಾಳು (ಎನ್‌ಎಂಇಒ–ಒಎಸ್) ಯೋಜನೆಯಡಿ ಎಣ್ಣೆ ಕಾಳು ಕೊಯ್ಲೋತ್ತರ ಘಟಕಕ್ಕೆ ನೆರವು ವಿತರಿಸಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ರಾಷ್ಟ್ರೀಯ ಖಾದ್ಯ ತೈಲ ಅಭಿಯಾನದ ಎಣ್ಣೆ ಕಾಳು ಯೋಜನೆಯಡಿ ಪ್ರಾಥಮಿಕ ಮತ್ತು ದ್ವಿತೀಯ ಎಣ್ಣೆ ಕಾಳು ಕೊಯ್ಲೋತ್ತರ ಘಟಕಕ್ಕೆ ಮೂಲ ಸೌಕರ್ಯ ಕಲ್ಪಿಸಲು, ಸ್ಥಳೀಯವಾಗಿ ಉದ್ಯೋಗಾವಕಾಶ ಕಲ್ಪಿಸಲು, ಶುದ್ಧ ಖಾದ್ಯ ತೈಲ ಉಪಯೋಗಿಸಲು ಅನುಕೂಲವಾಗುವಂತೆ ಹಾಗೂ ಎಣ್ಣೆ ಕಾಳು ಬೆಳೆಗಳನ್ನು ಉತ್ತೇಜಿಸಲು ಈ ಯೋಜನೆ ಅನುಷ್ಠಾನಗೊಳಿಸಲಾಗುತ್ತಿದೆ.

ಯೋಜನಾ ವರದಿಯ ಶೇ.33ರಷ್ಟು ಅಥವಾ 9.99 ಲಕ್ಷ ರೂ. ಮೀರದಂತೆ ಸಹಾಯಧನ ಒದಗಿಸಲಾಗುವುದು. ಎಣ್ಣೆ ಕಾಳು ಕೊಯ್ಲೋತ್ತರ ಘಟಕಗಳಿಗೆ ಅವಶ್ಯವಿರುವ ಯಂತ್ರೋಪಕರಣ ಖರೀದಿಸಲು ಸರಕಾರ ಹಾಗೂ ಸರಕಾರೇತರ ಸಂಸ್ಥೆಗಳು, ರೈತ ಉತ್ಪಾದಕ ಸಂಘಗಳು ವಿಸ್ತೃತ ಯೋಜನಾ ವರದಿಯೊಂದಿಗೆ ಜುಲೈ 31ರೊಳಗಾಗಿ ಅರ್ಜಿಯನ್ನು ಜಂಟಿ ಕೃಷಿ ನಿರ್ದೇಶಕರ ಕಚೇರಿ ರಾಯಚೂರಿನಲ್ಲಿ ಸಲ್ಲಿಸಬಹುದಾಗಿದೆ.


ಈ ಘಟಕದಲ್ಲಿ ಕಟ್ಟಡ ವೆಚ್ಚ ಮತ್ತು ಭೂಮಿ ಬಾಡಿಗೆ ಪರಿಗಣಿಸಲಾಗುವುದಿಲ್ಲ. ಅರ್ಜಿಗಳನ್ನು ಜಿಲ್ಲಾ ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಅಧ್ಯಕ್ಷತೆಯಲ್ಲಿ ಪರಿಶೀಲಿಸಿ, ಅರ್ಹ ಫಲಾನುಭವಿಯನ್ನು ಕಾರ್ಯಕಾರಿ ಸಮಿತಿಯಲ್ಲಿ ಆಯ್ಕೆ ಮಾಡಲಾಗುವುದು ಎಂದು ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅಧಿಕಾರಿಗಳು, ಸಿಬ್ಬಂದಿಗೆ ಪ್ರೇರಣಾದಾಯಕ ಉಪನ್ಯಾಸ

**ರಾಯಚೂರು,ಜು.25–**ಒತ್ತಡ ನಿರ್ವಹಣೆ ಕುರಿತು ಅಂತಾರಾಷ್ಟ್ರೀಯ ಪ್ರೇರಣಾದಾಯಕ ಭಾಷಣಕಾರರಾದ ಡಾ.ಇ.ವಿ.ಸ್ವಾಮಿನಾಥನ್ ಅವರಿಂದ ಪ್ರೇರಣಾದಾಯಕ ಉಪನ್ಯಾಸ ಕಾರ್ಯಕ್ರಮವನ್ನು ನಗರದ ಪಂಡಿತ್ ಜಂಬಲದಿನ್ನಿ ರಂಗಮಂದಿರದಲ್ಲಿ ಜುಲೈ 28ರ ಮಧ್ಯಾಹ್ನ 3ಕ್ಕೆ ಏರ್ಪಡಿಸಲಾಗಿದ್ದು, ಜಿಲ್ಲೆಯ ಸರಕಾರಿ ಇಲಾಖೆಯ ಎಲ್ಲಾ ಮುಖ್ಯಸ್ಥರು, ಸಾರ್ವಜನಿಕರು ಪಾಲ್ಗೊಳ್ಳುವಂತೆ ಜಿಲ್ಲಾಧಿಕಾರಿಗಳು ಕೋರಿದ್ದಾರೆ.

ರಾಯಚೂರಿನ ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರೀಯ ವಿಶ್ವವಿದ್ಯಾಲಯ ಶಾಖೆಯವರು ಡಾ.ಇ.ವಿ. ಸ್ವಾಮಿನಾಥನ್ ಅವರ ಪ್ರೇರಣಾದಾಯಕ ಉಪನ್ಯಾಸವನ್ನು ರಾಯಚೂರು ಜಿಲ್ಲೆಯ ಸಮಸ್ತ ಇಲಾಖೆಯ ಅಧಿಕಾರಿ ಹಾಗೂ ಸಿಬ್ಬಂದಿ ಏರ್ಪಡಿಸಲು ವಿನಂತಿಸಲಾಗಿದ್ದು, ಅದರಂತೆ ಜಿಲ್ಲೆಯ ಸಮಸ್ತ ಇಲಾಖೆಯ ಅಧಿಕಾರಿ ಹಾಗೂ ಸಿಬ್ಬಂದಿಯು ಒತ್ತಡ ನಿರ್ವಹಣೆ ಕುರಿತಾದ ಉಪನ್ಯಾಸದಲ್ಲಿ ಭಾಗಿಯಾದಲ್ಲಿ ಜೀವನದಲ್ಲಿ ವೈಯಕ್ತಿಕ ಅಭಿವೃದ್ಧಿ, ಮನೋಸ್ಥೈರ್ಯ ಹಾಗೂ ಸಾರ್ವಜನಿಕ ಸೇವೆಯಲ್ಲಿನ ಪರಿಣಾಮಕಾರಿ ನಾಯಕತ್ವವನ್ನು ಉತ್ತೇಜಿಸಲು ಸಹಕಾರಿ ಆಗಲಿದೆ ಎಂದು ಆಶಿಸಲಾಗಿದ್ದು, ಜಿಲ್ಲೆಯ ಎಲ್ಲಾ ಸರಕಾರಿ ಇಲಾಖೆಯ ಮುಖ್ಯಸ್ಥರು ಸಾರ್ವಜನಿಕರ ಸೇವೆಯಲ್ಲಿ ಯಾವುದೇ ತೊಂದರೆಯಾಗದಂತೆ ಅವಶ್ಯ ಕ್ರಮಗಳನ್ನು ಕೈಗೊಂಡು ಈ ಕಾರ್ಯಕ್ರಮದಲ್ಲಿ ತಾವು ಮತ್ತು ತಮ್ಮ ಇಲಾಖೆಯ ಎಲ್ಲಾ ಸಿಬ್ಬಂದಿ ವರ್ಗದವರು ಪಾಲ್ಗೊಳ್ಳುವಂತೆ ಜಿಲ್ಲೆಯ ಸರಕಾರಿ ಇಲಾಖೆಯ ಎಲ್ಲಾ ಮುಖ್ಯಸ್ಥರಿಗೆ ಜಿಲ್ಲಾಧಿಕಾರಿಗಳು ತಿಳಿಸಿದ್ದಾರೆ.

# ಅಧಿಕಾರಿಗಳಿಗೆ ಸಾಮಾಜಿಕ ಕಾಳಜಿ ಇರಲಿ ಉಪಲೋಕಾಯುಕ್ತ ಬಿ ವೀರಪ್ಪ ಸಲಹೆ



**ಯುವ ಮಾರ್ಗ ಸುದ್ದಿ**

**ರಾಯಚೂರು,ಜು.25–** ಯಾವುದೇ ರೀತಿಯ ದೂರುಗಳು ಬಾರದ ಹಾಗೆ ಪ್ರತಿಯೊಂದು ಇಲಾಖೆಯಲ್ಲಿ ಆಯಾ ಯೋಜನೆಗಳಿಗೆ ಫಲಾನುಭವಿಗಳ ಆಯ್ಕೆ ಮಾಡುವಾಗ ಪಾರದರ್ಶಕತೆಯನ್ನು ಕಾಯ್ದುಕೊಳ್ಳಬೇಕು ಎಂದು ಗೌರವಾನ್ವಿತ ಕರ್ನಾಟಕ ಉಪಲೋಕಾಯುಕ್ತರಾದ ಬಿ ವೀರಪ್ಪ ಅವರು ವಿವಿಧ ಇಲಾಖೆಗಳ ಅಧಿಕಾರಿಗಳಿಗೆ ಸಲಹೆ ಮಾಡಿದರು.

ರಾಯಚೂರ ಜಿಲ್ಲಾ ವ್ಯಾಪ್ತಿಯ ಬಾಕಿ ಇರುವ ದೂರುಗಳ ವಿಚಾರಣೆ ಮತ್ತು ವಿಲೇವಾರಿಯ ಬಗ್ಗೆ ಜುಲೈ 24ರಂದು ಸಂಜೆ ನೂತನ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ವಿಡಿಯೋ ಸಂವಾದ ನಡೆಸಿ ಅವರು ಮಾತನಾಡಿದರು.ಅಧಿಕಾರಿಗಳು ಒತ್ತಡಕ್ಕೆ ಮನಿದು ಅನರ್ಹರಿಗೆ ಅವಕಾಶ ಕೊಡುತ್ತಿದ್ದಾರೆ. ಇದರಿಂದಾಗಿ ಅರ್ಹ ಫಲಾನುಭವಿಗಳಿಗೆ ಸರ್ಕಾರಿ ಸೌಲಭ್ಯಗಳು ದೊರಕದೇ ಅನ್ಯಾಯವಾಗುತ್ತಿದೆ ಎಂದು ಸಾರ್ವಜನಿಕ ದೂರುಗಳು ಹೆಚ್ಚುತ್ತಿವೆ. ಅಧಿಕಾರಿಗಳಿಗೆ ಸಾಮಾಜಿಕ ಕಾಳಜಿ ಇರಬೇಕು. ಯಾರು ಎಷ್ಟೇ ಒತ್ತಡ ಹಾಕಿದರು ಸಹ ಅದನ್ನು ಪರಿಗಣಿಸದೇ ಸರ್ಕಾರದ ನಿಯಮಾವಳಿಯಂತೆ ಯೋಜನೆಗಳಿಗೆ ಅರ್ಹರನ್ನೇ ಆಯ್ಕೆ ಮಾಡಿ ಸಾಮಾಜಿಕ ನ್ಯಾಯ ಕಾಪಾಡಬೇಕು ಎಂದು ಉಪ ಲೋಕಾಯುಕ್ತರು ಸಲಹೆ ಮಾಡಿದರು.

ಸರ್ಕಾರಿ ಆಸ್ಪತ್ರೆಗಳಿಗೆ ಹೋಗುವ ರೋಗಿಗಳಿಗೆ ಅಲ್ಲಿನ ವೈದ್ಯರು ಖಾಸಗಿ ದವಾಖಾನೆಗೆ ಕಳುಹಿಸಕೂಡದು. ಚಿಕಿತ್ಸೆ ನೀಡಿದ ಬಳಿಕ ಔಷಧಿಯನ್ನು ಹೊರಗಡೆ ಪಡೆದುಕೊಳ್ಳಲು ರೋಗಿಗೆ ಸೂಚಿಸಬಾರದು. ಈ ವಿಷಯದ ಬಗ್ಗೆ ಗಮನ ಹರಿಸುವಂತೆ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು ಎಲ್ಲ ತಾಲೂಕು ಸಾರ್ವಜನಿಕ ಆಸ್ಪತ್ರೆಗಳು, ಸಮುದಾಯ ಮತ್ತು ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ಸುತ್ತೋಲೆ ರವಾನಿಸಿ ಸೂಚನೆ ನೀಡಬೇಕು. ಆಸ್ಪತ್ರೆಗಳಲ್ಲಿ ಅವಶ್ಯಕವಾದ ಸಿಟಿ ಸ್ಕ್ಯಾನ್, ಎಂಆರ್‌ಐ ಸ್ಕ್ಯಾನ್ ಮಷಿನ್‌ಗಳು ಇರುವಂತೆ ನೋಡಿಕೊಳ್ಳಬೇಕು ಎಂದು ಉಪಲೋಕಾಯುಕ್ತರು ಡಿಎಚ್‌ಓ ಡಾ.ಸುರೇಂದ್ರಬಾಬು ಅವರಿಗೆ ನಿರ್ದೇಶನ ನೀಡಿದರು. ರಾಯಚೂರಿನ ರಾಜೀವಗಾಂಧಿ ಸೂಪರ್ ಸ್ಪೇಷಾಲಿಟಿ ಆಸ್ಪತ್ರೆ ಒಪೆಕ್ ಹಾಗೂ ತಾಯಿ ಮತ್ತು ಮಕ್ಕಳ ಆಸ್ಪತ್ರೆಗಳಲ್ಲಿ ಸಹ ಸರಿಯಾದ ನಿಯಮಗಳು ಪಾಲನೆ ಆಗಬೇಕು ಎಂದು ಸೂಚನೆ ನೀಡಿದರು.

ಸಮಾಜ ಕಲ್ಯಾಣ ಇಲಾಖೆ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಮತ್ತು ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯ ಅಧೀನದಲ್ಲಿ ಬರುವ ರಾಯಚೂರ ಜಿಲ್ಲಾ ವ್ಯಾಪ್ತಿಯ ಎಲ್ಲ ಮೆಟ್ರಿಕ್ ಪೂರ್ವ, ನಂತರದ ವಸತಿ ನಿಲಯಗಳು ಮತ್ತು ವೃತ್ತಿಪರ ಕೋರ್ಸಿನ ಎಲ್ಲ ವಸತಿ ನಿಲಯಗಳಲ್ಲಿನ ವಿದ್ಯಾರ್ಥಿಗಳಿಗೆ ಶುದ್ಧ ಕುಡಿಯುವ ನೀರು, ಊಟ, ಉಪಹಾರ, ಸಮವಸ್ತ್ರ ಸೇರಿದಂತೆ ಇನ್ನಿತರ ಎಲ್ಲ ಸೌಕರ್ಯಗಳನ್ನು ಸಮರ್ಪಕವಾಗಿ ನೀಡಬೇಕು. ಅನಿರೀಕ್ಷಿತ ಭೇಟಿ ವೇಳೆ ಏನಾದರು ಲೋಪದೋಷಗಳು ಕಂಡುಬಂದಲ್ಲಿ ಮುಲಾಜಿಲ್ಲದೇ ಕ್ರಮ ಜರುಗಿಸಲಾಗುವುದು ಎಂದು ಇದೆ ವೇಳೆ ಉಪ ಲೋಕಾಯುಕ್ತರು ಸಂಬಂಧಿಸಿದ ಇಲಾಖೆಯ ಜಿಲ್ಲಾ ಹಾಗೂ ತಾಲೂಕುಮಟ್ಟದ ಅಧಿಕಾರಿಗಳಿಗೆ ಎಚ್ಚರಿಕೆ ನೀಡಿದರು. ಮಹಿಳೆಯರು ಮತ್ತು ಮಕ್ಕಳ ಆರೋಗ್ಯ ತುಂಬಾ ಮುಖ್ಯ. ಈ ದಿಶೆಯಲ್ಲಿ ಜಿಲ್ಲೆಯ ಪ್ರತಿಯೊಂದು ಅಂಗನವಾಡಿಯಲ್ಲಿ ಸರ್ಕಾರದ ಮಾರ್ಗಸೂಚಿಯಂತೆ ಮಕ್ಕಳಿಗೆ ಮತ್ತು ಗರ್ಭಿಣಿಯರಿಗೆ ಪೌಷ್ಠಿಕ ಆಹಾರ ನೀಡುವಂತಾಗಬೇಕು. ತಾವು ರಾಯಚೂರ ಪ್ರವಾಸದಲ್ಲಿದ್ದಾಗ ಅಂಗನವಾಡಿಗಳಿಗೆ ಭೇಟಿ ನೀಡಿ ಪರಿಶೀಲಿಸುವುದಾಗಿ ಉಪಲೋಕಾಯುಕ್ತರು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರಿಗೆ ತಿಳಿಸಿ ಅಂಗನವಾಡಿ ಮೇಲೆ ಸೂಕ್ತ ಮೇಲ್ವಿಚಾರಣೆಗೆ ನಿರ್ದೇಶನ ನೀಡಿದರು.

ಮಹಾತ್ಮಗಾಂಧಿ ರಾಷ್ಟ್ರೀಯ ಉದ್ಯೋಗ ಖಾತರಿ ಯೋಜನೆಯು ಜಾಗತಿಕವಾಗಿ ಮೆಚ್ಚುಗೆ ಗಳಿಸಿದ ಯೋಜನೆಯಾಗಿದೆ. ಈ ಯೋಜನೆಯಿಂದಾಗಿ ಗ್ರಾಮೀಣ ಭಾಗದ ಕೃಷಿ ಕೂಲಿ ಕಾರ್ಮಿಕರಿಗೆ ಸಾಕಷ್ಟು ಅನುಕೂಲವಾಗಿದೆ. ಹೀಗಾಗಿ ನರೇಗಾ ಯೋಜನೆಯಡಿ ಬೇರೆ ಬೇರೆ ಕೆಲಸ ಕಾರ್ಯಗಳಿಗೆ ಯಾವುದೇ ಕಾರಣಕ್ಕು ಜೆಸಿಬಿ ಮತ್ತು ಯಾವುದೇ ಯಂತ್ರವನ್ನು ಬಳಸಬಾರದು. ಕಡ್ಡಾಯವಾಗಿ ಕೃಷಿ ಕೂಲಿ ಕಾರ್ಮಿಕರಿಗೆ ಉದ್ಯೋಗ ಕಲ್ಪಿಸಲು ಸಂಬಂಧಿಸಿದ ಅಧಿಕಾರಿಗಳು ಒತ್ತು ಕೊಡಬೇಕು ಎಂದು ಉಪ ಲೋಕಾಯುಕ್ತರು ಸೂಚನೆ ನೀಡಿದರು. ಗ್ರಾಮೀಣ ಪ್ರದೇಶದಲ್ಲಿ ವಿದ್ಯುತ್ ವ್ಯತ್ಯಯ ನಿರಂತರವಾಗಿರುತ್ತದೆ. ಬಹುತೇಕ ಕಡೆಗಳಲ್ಲಿ ಬೀದಿ ದೀಪಗಳು ಇರುವುದಿಲ್ಲ. ವಿದ್ಯುತ್ ಪ್ರವರ್ತಕ (ಟಿ.ಸಿ)ಗಳು ಬೇಕು ಎಂದು ಎಷ್ಟೇ ಸಲ ಅಲೆದಾಡಿದರೂ ಸಕಾಲಕ್ಕೆ ಕೊಡುವುದಿಲ್ಲ ಎಂದು ಹಳ್ಳಿಯ ಜನರಿಂದ ದೂರುಗಳು ಹೆಚ್ಚುತ್ತಿವೆ. ಹೀಗಾಗಿ ಜೆಸ್ಕಾಂ ಅಧಿಕಾರಿಗಳು ಜಾಗೃತೆಯಿಂದ ಕೆಲಸ ಮಾಡಬೇಕು. ಗ್ರಾಮಸ್ಥರಿಗೆ ಕಚೇರಿಗೆ ಅಲೆದಾಡಿಸುವುದನ್ನು ತಪ್ಪಿಸಬೇಕು. ಇಲ್ಲವಾದಲ್ಲಿ ಕಠಿಣ ಕ್ರಮ ಜರುಗಿಸಲಾಗುವುದು ಎಂದು ಎಚ್ಚರಿಕೆ ನೀಡಿದರು.

ಬಹುತೇಕ ಕಡೆ ಸಾರ್ವಜನಿಕ ಕೆರೆ, ಬಾವಿ, ಸಾರ್ವಜನಿಕ ಸ್ಥಳಗಳನ್ನು ಪ್ರಭಾವಿ ವ್ಯಕ್ತಿಗಳು ಒತ್ತುವರಿ ಮಾಡುತ್ತಿದ್ದು ಇದರಿಂದಾಗಿ ಸಾಕಷ್ಟು ತೊಂದರೆಯಾಗುತ್ತಿದೆ. ಗ್ರಾಮಗಳಲ್ಲಿ ಚರಂಡಿ ವ್ಯವಸ್ಥೆ ಸರಿಯಾಗಿಲ್ಲ. ಸ್ಥಳೀಯ ಅಧಿಕಾರಿಗಳು ಗಮನ ಹರಿಸುತ್ತಿಲ್ಲ ಎಂದು ಲೋಕಾಯುಕ್ತ ಕಚೇರಿಯಲ್ಲಿ ಸಾಕಷ್ಟು ದೂರುಗಳು ಸಲ್ಲಿಕೆಯಾಗುತ್ತಿವೆ. ಈ ಬಗ್ಗೆ ವಿಶೇಷವಾಗಿ ಗ್ರಾಮ ಆಡಳಿತ ಅಧಿಕಾರಿಗಳು ಮತ್ತು ಪಿಡಿಓಗಳು ಗಮನ ಹರಿಸಿ ಮೇಲಧಿಕಾರಿಗಳಿಗೆ ವರದಿ ಮಾಡಲು ಮುತುವರ್ಜಿ ವಹಿಸಬೇಕು ಎಂದು ಸೂಚನೆ ನೀಡಿದರು.

ಪರಿಸರದ ಸಮತೋಲನ ಕಾಪಾಡುವಲ್ಲಿ ಗಿಡಮರಗಳ ಪಾತ್ರ ಅತೀ ಮಹತ್ವವಾಗಿದ್ದು ಅರಣ್ಯ ಅತೀಕ್ರಮಣಕ್ಕೆ ಕಡಿವಾಣ ಹಾಕಬೇಕು ಎಂದು ಉಪ ಲೋಕಾಯುಕ್ತರು, ಆರ್‌ಎಫ್‌ಓ ಅವರಿಂದ ಮಾಹಿತಿ ಪಡೆದುಕೊಂಡರು. ಅರಣ್ಯ ಅತೀಕ್ರಮಣದ ಪ್ರಕರಣಗಳ ವಿಲೇವಾರಿಗೆ ಸಂಬಂಧಿಸಿದಂತೆ ಅರಣ್ಯ ಇಲಾಖೆಯು ಇದುವರೆಗೆ ತೆಗೆದುಕೊಂಡ ಕ್ರಮಗಳ ಬಗ್ಗೆ ಮಾಹಿತಿ ಕೇಳಿದರು.

**ನಿಯಮಿತವಾಗಿ ಸಭೆ ನಡೆಸಿ:** ಕುಡಿಯುವ ಸಮರ್ಪಕವಾಗಿ ಸಿಗುತ್ತಿಲ್ಲ. ವಿದ್ಯುತ್ ಪೂರೈಕೆ ಇಲ್ಲ, ಅಧಿಕಾರಿಗಳು ಮಾಹಿತಿ ನೀಡುತ್ತಿಲ್ಲ, ಜೆಸ್ಕಾಂನಿಂದ ಟಿ.ಸಿ. ಕೊಡುತ್ತಿಲ್ಲ ಎನ್ನುವಂತಹ ದೂರುಗಳು ಸಾರ್ವಜನಿಕರಿಂದ ದಾಖಲಾಗುತ್ತಿದ್ದು ಈ ಬಗ್ಗೆ ಪರಿಶೀಲಿಸಿ, ಬೇಗನೆ ಇತ್ಯರ್ಥಗೊಳಿಸಿ ದೂರುದಾರರಿಗೆ ಹಿಂಬರಹ ನೀಡಬೇಕು. ತಹಸೀಲ್ದಾರರು ಮತ್ತು ತಾಲೂಕು ಪಂಚಾಯತ್ ಕಾರ್ಯ ನಿರ್ವಾಹಕ ಅಧಿಕಾರಿಗಳೊಂದಿಗೆ ನಿರಂತರ ಸಭೆ ನಡೆಸಿ ಈ ಬಗ್ಗೆ ಆಯಾ ತಾಲೂಕಿನ ತಹಸೀಲ್ದಾರರು ಮತ್ತು ತಾಲೂಕು ಪಂಚಾಯತ್ ಕಾರ್ಯನಿರ್ವಹಣಾಧಿಕಾರಿಗಳು ಗಮನ ಹರಿಸುವಂತೆ ಸೂಚನೆ ನೀಡಬೇಕು ಎಂದು ಜಿಲ್ಲಾಧಿಕಾರಿಗಳು ಮತ್ತು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಿಗೆ ಇದೆ ವೇಳೆ ಉಪ ಲೋಕಾಯುಕ್ತರು ತಿಳಿಸಿದರು.

ಈ ವೇಳೆ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಮಾತನಾಡಿ, ಗೌರವಾನ್ವಿತ ಉಪಲೋಕಾಯುಕ್ತರು ರಾಯಚೂರ ಭೇಟಿ ನೀಡುವ ವೇಳೆಯೊಳಗೆ, ಆಯಾ ಇಲಾಖೆಗಳ ಅಧಿಕಾರಿಗಳು ಸಾರ್ವಜನಿಕ ದೂರುಗಳ ಬಗ್ಗೆ ಗಮನ ಹರಿಸಿ ವಿಲೇವಾರಿಗೆ ಕ್ರಮವಹಿಸಬೇಕು. ದೂರುಗಳು ಇತ್ಯರ್ಥವಾದ ಬಗ್ಗೆ ವರದಿಯೊಂದಿಗೆ ಸಾರ್ವಜನಿಕ ಅಹವಾಲು ಆಲಿಕೆ ಸಭೆಗೆ ಆಗಮಿಸಬೇಕು. ಆರೋಗ್ಯ ಇಲಾಖೆ, ಜೆಸ್ಕಾಂ, ನಗರಾಭಿವೃದ್ಧಿ ಕೋಶ, ನರೇಗಾ ಯೋಜನೆಯ ಅಧಿಕಾರಿಗಳು ದೂರುಗಳ ವಿಲೆ ಬಗ್ಗೆ ಹೆಚ್ಚಿನ ಗಮನ ಹರಿಸಬೇಕು ಎಂದು ಸೂಚನೆ ನೀಡಿದರು.

ಈ ವೇಳೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಈಶ್ವರ್ ಕಾಂದೂ ಅವರು ಮಾತನಾಡಿ, ಜಿಲ್ಲೆಯ ಎಲ್ಲಾ ಪಂಚಾಯತಗಳ ಗ್ರಾಮ ಅಭಿವೃದ್ಧಿ ಅಧಿಕಾರಿಗಳು, ಲೋಕಾಯುಕ್ತರು ಸಭೆ ನಡೆಸಿ ತಿಳಿಸಿದ ವಿಷಯಗಳ ಬಗ್ಗೆ ಗಮನ ಹರಿಸಬೇಕು. ಪ್ರತಿಯೊಂದು ಗ್ರಾಮದಲ್ಲಿ ಶುದ್ಧ ಕುಡಿಯುವ ನೀರು ಪೂರೈಕೆ, ಶಿಸ್ತುಬದ್ಧವಾಗಿ ಗಟಾರು ನಿರ್ಮಾಣ, ಬೀದಿದೀಪ ಅಳವಡಿಕೆ, ಗ್ರಾಮದ ಶುಚಿತ್ವ ಮತ್ತು ನರೇಗಾ ಯೋಜನೆ ಸಮರ್ಪಕ ಅನುಷ್ಠಾನದ ಬಗ್ಗೆ ಗಮನ ಹರಿಸಬೇಕು. ಎಲ್ಲ ತಾಲೂಕು ಪಂಚಾಯತ್ ಕಾರ್ಯನಿರ್ವಹಣಾಧಿಕಾರಿಗಳು ಮೇಲಿಂದ ಮೇಲೆ ಸಭೆ ನಡೆಸಿ ಸೂಕ್ತ ಮೇಲ್ವಿಚಾರಣೆ ಮಾಡಬೇಕು ಎಂದು ಸೂಚನೆ ನೀಡಿದರು.

ಸಭೆಯಲ್ಲಿ ಗೌರವಾನ್ವಿತ ಹಿರಿಯ ಶ್ರೇಣಿಯ ದಿವಾಣಿ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಹೆಚ್ ಎ ಸಾತ್ವಿಕ್, ರಾಯಚೂರ ಜಿಲ್ಲಾ ಲೋಕಾಯುಕ್ತ ಪೊಲೀಸ್ ಅಧೀಕ್ಷಕರಾದ ಸತೀಶ್ ಚಿಟಗುಪ್ಪಿ, ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ, ಜಿಲ್ಲಾ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿಗಳಾದ ಕುಮಾರಸ್ವಾಮಿ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಹಾಗೂ ತಾಲೂಕು ಮಟ್ಟದ ಅಧಿಕಾರಿಗಳು ಇದ್ದರು.

## ಇಂದು ಲಯನ್ಸ್ ಕ್ಲಬ್ ವತಿಯಿಂದ ಕಿವಿ, ಮೂಗು, ಗಂಟಲಿನ ಉಚಿತ ತಪಾಸಣಾ ಶಿಬಿರ

**ಯುವ ಮಾರ್ಗ ಸುದ್ದಿ**

**ಮಾನ್ವಿ,ಜು.25–** ಪಟ್ಟಣದ ಅಶ್ವನಿ ಮಲ್ಟಿಸ್ಪೆಷಾಲಿಟಿ ಹಾಸ್ಪಿಟಲ್‌ನಲ್ಲಿ ಜುಲೈ 26 ರಂದು ಶನಿವಾರ ಬೆಳಿಗ್ಗೆ 10 ಗಂಟೆಯಿಂದ ಸಂಜೆ 6 ಗಂಟೆವರೆಗೆ ಮಾನ್ವಿ ಲಯನ್ಸ್ ಕ್ಲಬ್ ಮತ್ತು ಅಶ್ವನಿ ಮಲ್ಟಿಸ್ಪೆಷಾಲಿಟಿ ಹಾಸ್ಪಿಟಲ್ ಸಹಭಾಗಿತ್ವದಲ್ಲಿ ಕಿವಿ, ಮೂಗು ಮತ್ತು ಗಂಟಲಿನ ಉಚಿತ ತಪಾಸಣಾ ಶಿಬಿರ ನಡೆಯಲಿದ್ದು ಕಿವಿ ಸೋರುವಿಕೆ, ಕಿವಿ ತುರಿಕೆ, ಮೂಗು ನೋವು, ತಲೆ ಸುತ್ತು, ತಲೆ ನೋವು, ಕಿವುಡುತನ, ನೆಗಡಿ, ಗಂಟಲು ನೋವು ಮುಂತಾದ ಖಾಯಿಲೆಯುಳ್ಳವರಿಗೆ ಶ್ರವಣ ದೋಷ ಉಳ್ಳವರಿಗೆ ಕಿವಿ ಕೇಳುವಂತೆ ಗುಣಮಟ್ಟದ ಹಿಯರಿಂಗ್ ಮಷಿನ್‌ಗಳನ್ನು ಉಚಿತವಾಗಿ ನೀಡಲಾಗುವುದು ಹಾಗೂ ಮಾತು ಬಾರದವರಿಗೆ ಸ್ಪೀಚ್ ಥೆರಪಿಯೊಂದಿಗೆ ಮಾತನಾಡಲು ಬರುವಂತೆ ಮಾಡಲಾಗುವುದು ಖ್ಯಾತ ಕಿವಿ.ಮೂಗು ,ಗಂಟಲು ತಜ್ಞರಾದ ಡಾ.ಜೆ.ಕೆ.ಗುಪ್ತಾ ಮತ್ತು ಡಾ.ಕೃಷ್ಣಯ್ಯ ರವರು ಚಿಕಿತ್ಸೆ ನೀಡಲಿರುವುದರಿಂದ ತಾಲೂಕಿನ ಸಾರ್ವಜನಿಕರು ಶಿಭಿರದ ಪ್ರಯೋಜನ ಪಡೆಯುವಂತೆ ಹೆಚ್ಚಿನ ಮಾಹಿತಿಗಾಗಿ ಹಾಗೂ ಹೆಸರುಗಳ ನೊಂದಾಣಿಗಾಗಿ ದೂ.ಸಂಖ್ಯೆಗಳಿಗೆ 9902409198, 8073046731, 9535607038, 9964810100, 9008403224, 9880894322 ಸಂಪರ್ಕಿಸಬಹುದಾಗಿದೆ ಮಾನ್ವಿ ಲಯನ್ಸ್ ಕ್ಲಬ್ ಅಧ್ಯಕ್ಷ ಎಂ.ನಾಗರಾಜ ಹಾಗೂ ಅಶ್ವನಿ ಆಸ್ಪತ್ರೆಯ ತಜ್ಞ ವೈದ್ಯರಾದ ಡಾ.ಅಶ್ವನಿಕಾಂತ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಇ–ಆಸ್ತಿ ತಂತ್ರಾಂಶದಲ್ಲಿ ಅಡಚಣೆ

**ರಾಯಚೂರು,ಜು.25–**ಕರ್ನಾಟಕ ಮುನ್ಸಿಪಲ್ ಸೊಸೈಟಿ ಬೆಂಗಳೂರು ಅವರ ವಾಟ್ಸಾಪ್ ಸಂದೇಶದ ಪ್ರಕಾರ ಇ–ಆಸ್ತಿ ತಂತ್ರಾಂಶದಲ್ಲಿ ಲ್ಯಾಬ್/ ಟೇಬಲ್ ಸ್ಪೇಷ್ ಚಲಾವಣೆ ಕಾರ್ಯವು ರಾಜ್ಯ ಮಟ್ಟದಲ್ಲಿ ವಿಫಲವಾಗಿದ್ದು, ಕೆಎಂಡಿಎಸ್ ಡಿಬಿಎ ತಂಡವು ಜುಲೈ 24 ರಿಂದ ಚಟುವಟಿಕೆ ನಿರ್ವಹಣೆಯಲ್ಲಿ ಅಡಚಣೆಗಳು ಸಂಭವಿಸಲಿವೆ.

ಮ್ಯೂಟೇಶನ್ ಮಾಡ್ಯೂಲ್ (Mutation Module) ಮುಂಬರುವ ಸುಮಾರು 8 ರಿಂದ 10 ದಿನಗಳವರೆಗೆ ಲಭ್ಯವಿರುವುದಿಲ್ಲ. ಎನ್‌ಎಂಟಿ_ಎಪಿಪಿಎಲ್_ಡಾಕ್ಯೂಮೆಂಟ್ಸ್ (NMT_APPL_DOCUMENTS) ಸೇವೆ ಕಾರ್ಯನಿರ್ವಹಿಸುವುದಿಲ್ಲ. ಆದ ಕಾರಣ ಸಾರ್ವಜನಿಕರು ಮಹಾನಗರ ಪಾಲಿಕೆಯೊಂದಿಗೆ ಸಹಕರಿಸುವಂತೆ ರಾಯಚೂರು ಮಹಾನಗರ ಪಾಲಿಕೆಯ ಆಯಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಆಗಸ್ಟ್ 20ರಂದು ಬಹಿರಂಗ ಹರಾಜ

**ರಾಯಚೂರು,ಜು.24–**ಇಲ್ಲಿನ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ ಅನುಪಯುಕ್ತ ಸ್ಕ್ರಾಪ್‌ಗಳನ್ನು ಅದೇ ಸ್ಥಿತಿಯಲ್ಲಿ ಒಂದೇ ಲಾಟಿನಲ್ಲಿ ವಿಲೇವಾರಿ ಮಾಡಲು ಬಹಿರಂಗ ಹರಾಜು ಮಾಡಲಾಗುತ್ತಿದ್ದು, ಆಸಕ್ತಿ ಇರುವ ಬಿಡ್‌ದಾರರು ಭಾಗವಹಿಸಬಹುದಾಗಿದೆ.

ಆಸಕ್ತರು ಆಗಸ್ಟ್ 20ರ ಬೆಳಿಗ್ಗೆ 12 ಗಂಟೆಗೆ ಸಂಸ್ಥೆಯ ಅವರಣದಲ್ಲಿ ಬಹಿರಂಗ ಹರಾಜು ಹಮ್ಮಿಕೊಳ್ಳಲಾಗಿದೆ. ಬಿಡ್‌ದಾರರು ಆಗಸ್ಟ್ 18ರೊಳಗಾಗಿ 5 ಸಾವಿರ ರೂಪಾಯಿಗಳ ಇಎಮ್‌ಡಿ ಹಣ ಪಾವತಿಸಿ ಹರಾಜಿನಲ್ಲಿ ಬಾಗವಹಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಕಚೇರಿಯನ್ನು ಮೊಬೈಲ್ ಸಂಖ್ಯೆ: 9740671796, 9449185499 ಹಾಗೂ 8904784507ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಮಾದೇಷ್ಟರ ಖಾಲಿ ಹುದ್ದೆಗೆ ಅರ್ಜಿ ಆಹ್ವಾನ

**ರಾಯಚೂರು,ಜು.24–**ರಾಯಚೂರು ಜಿಲ್ಲಾ ಗೃಹ ರಕ್ಷಕ ದಳದ ಗೌರವ ಸಮಾದೇಷ್ಟರ ಖಾಲಿ ಇರುವ ಹುದ್ದೆಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದ್ದು, ಆಸಕ್ತರು ಜಿಲ್ಲಾಧಿಕಾರಿಗಳ ಕಚೇರಿಯಿಂದ ಅರ್ಜಿಗಳನ್ನು ಪಡೆದು ಅಗತ್ಯ ದಾಖಲೆಗಳೊಂದಿಗೆ ಅರ್ಜಿಯನ್ನು ರಾಯಚೂರು ಜಿಲ್ಲೆಯ ಜಿಲ್ಲಾಧಿಕಾರಿಗಳ ಕಚೇರಿಗೆ ಆಗಸ್ಟ್ 30ರೊಳಗಾಗಿ ಸಲ್ಲಿಸಬಹುದಾಗಿದೆ ಎಂದು ಗೃಹ ರಕ್ಷಕ ದಳದ ಆರಕ್ಷಕ ಮಹಾ ನಿರ್ದೇಶಕರಾದ ಜೆ.ಕೆ.ರಶ್ಮಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜುಲೈ 27ಕ್ಕೆ ಸಚಿವರಾದ ಡಾ.ಶರಣಪ್ರಕಾಶ ಆರ್. ಪಾಟೀಲ ಜಿಲ್ಲಾ ಪ್ರವಾಸ

**ರಾಯಚೂರು,ಜು.24–** ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಶರಣಪ್ರಕಾಶ ಆರ್. ಪಾಟೀಲ ಅವರು ಜುಲೈ 27ರಂದು ರಾಯಚೂರು ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡಿದ್ದಾರೆ.

ಅಂದು ಬೆಳಿಗ್ಗೆ 8 ಗಂಟೆಗೆ ಕಲಬುರಗಿಯಿಂದ ರಸ್ತೆ ಮೂಲಕ ಲಿಂಗಸುಗೂರಿಗೆ ಆಗಮಿಸಿ ಬೆಳಿಗ್ಗೆ 11 ಗಂಟೆಗೆ ಲಿಂಗಸುಗೂರು ಪಟ್ಟಣದ ವಿಜಯಮಹಾಂತೇಶ್ವರ ಶಾಖಾ ಮಠದಲ್ಲಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ ಜಿಲ್ಲಾ ಘಟಕ ರಾಯಚೂರು ಹಾಗೂ ವಾರ್ತಾ ಮತ್ತು ಸಂಪರ್ಕ ಇಲಾಖೆ ರಾಯಚೂರು ಇವರ ಸಂಯುಕ್ತಾಶ್ರಯದಲ್ಲಿ ನಡೆಯಲಿರುವ ಜಿಲ್ಲಾಮಟ್ಟದ ಪತ್ರಿಕಾ ದಿನಾಚರಣೆ ಹಾಗೂ ವಾರ್ಷಿಕ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ.

ಮಧ್ಯಾಹ್ನ 2.30ಕ್ಕೆ, ಲಿಂಗಸುಗೂರು ಪಟ್ಟಣದಲ್ಲಿ ನೂತನವಾಗಿ ನಿರ್ಮಿಸಲಾದ ಡಾ.ಬಿ.ಆರ್.ಅಂಬೇಡ್ಕರ್ ಭವನ ಉದ್ಘಾಟನೆ ಕಾರ್ಯಕ್ರಮದಲ್ಲಿ ಭಾಗವಹಿಸುವರು. ಮಧ್ಯಾಹ್ನ 3 ಗಂಟೆಗೆ ಪಟ್ಟಣದ ತಾಲ್ಲೂಕು ಪಂಚಾಯತ್ ಸಭಾಂಗಣದಲ್ಲಿ ನಡೆಯಲಿರುವ ಲಿಂಗಸುಗೂರು ತಾಲ್ಲೂಕಿನ ಪ್ರಗತಿ ಪರಿಶೀಲನಾ ಸಭೆಯಲ್ಲಿ ಭಾಗವಹಿಸುವರು. ಸಂಜೆ 5.30ಕ್ಕೆ ಲಿಂಗಸುಗೂರಿನಿಂದ ರಸ್ತೆ ಮೂಲಕ ಕಲಬುರಗಿಗೆ ಪ್ರಯಾಣ ಬೆಳೆಸಲಿದ್ದಾರೆ ಎಂದು ಸಚಿವರ ಆಪ್ತ ಕಾರ್ಯದರ್ಶಿಗಳಾದ ಕೃಷ್ಣಗೌಡ ತಾಯಣ್ಣವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಇಂದು ಕನ್ನಡ ಭಾಷಾ ಪರೀಕ್ಷೆ: ಪರೀಕ್ಷಾ: ಕೇಂದ್ರಗಳ ಸುತ್ತಲು ನಿಷೇಧಾಜ್ಞೆ ಜಾರಿ

**ರಾಯಚೂರು,ಜು.25–** ಕರ್ನಾಟಕ ಲೋಕಸೇವಾ ಆಯೋಗವು ದಿನಾಂಕ 13–3–2024ರಂದು ಅಧಿಸೂಚಿಸಿರುವ ವಿವಿಧ ಇಲಾಖೆಗಳ ಹೈ.ಕ.ವೃಂದದ ಗ್ರೂಪ್ ಬಿ ಹುದ್ದೆಗಳಿಗೆ ಕನ್ನಡ ಭಾಷಾ ಪರೀಕ್ಷೆಯು ರಾಯಚೂರ ತಾಲೂಕಿನ 8 ಪರೀಕ್ಷಾ ಕೇಂದ್ರಗಳಲ್ಲಿ ಜುಲೈ 26ರಂದು ನಡೆಯಲಿದೆ. ಈ ಪರೀಕ್ಷೆಯು ಸುರಕ್ಷಿತವಾಗಿ ನಡೆಸುವ ಉದ್ದೇಶದಿಂದ ಪರೀಕ್ಷಾ ಕೇಂದ್ರಗಳ ಸುತ್ತಲು 200 ಮೀಟರ್ ಪ್ರದೇಶವನ್ನು ನಿಷೇಧಿತ ಪ್ರದೇಶವೆಂದು ಘೋಷಿಸಿ ನಿಷೇಧಾಜ್ಞೆ ಜಾರಿಗೊಳಿಸಿ ಜಿಲ್ಲಾ ದಂಡಾಧಿಕಾರಿಗಳು ಆಗಿರುವ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಅವರು ಆದೇಶ ಹೊರಡಿಸಿದ್ದಾರೆ. ಈ ಪರೀಕ್ಷಾ ಕೇಂದ್ರಗಳ ಸುತ್ತಲಿನ ಎಲ್ಲಾ ಝರಾಕ್ಸ ಅಂಗಡಿಗಳನ್ನು ಮತ್ತು ಸೈಬರ್ ಕೆಫೆಗಳನ್ನು ಪರೀಕ್ಷಾ ಸಮಯದಲ್ಲಿ ಕಡ್ಡಾಯವಾಗಿ ಮುಚ್ಚುವಂತೆ ಆದೇಶಿಸಲಾಗಿದೆ.

Owned, Printed and published by ANILKUMAR H from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at MAA FRIENDS PRINTING PRESS, Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: ANILKUMAR H